ಶುಕ್ರವಾರ 09.01.2026
ಬೆಂಗಳೂರು, ಬೆಲೆ: 5ರೂ,
2 ಪುಟಗಳು
ಸಂಪುಟ 01 - ಸಂಚಿಕೆ 115
Digital Varthe Kannada Daily
Volume 01 - Issue 115
Friday 09.01.2026
Price: 5/- Rs
2 Pages Bangalore

PRGI/RNI: KNKAN/25/A1348

# ಡಿಜಿಟಲ್ ವಾರ್ತೆ

ಕನ್ನಡಿಗರ ಶಕ್ತಿ
ಕನ್ನಡ ದಿನಪತ್ರಿಕೆ

DIGITAL VARTHE
digitalvarthe@gmail.com
www.digitalvarthe.com

## ಬಸ್ ಅಪಘಾತದಲ್ಲಿ ಹಲವರಿಗೆ ಗಾಯ; ಓರ್ವ ವಿದ್ಯಾರ್ಥಿ ಸ್ಥಿತಿ ಗಂಭೀರ



**ಉತ್ತರ ಕನ್ನಡ:** ರಾಜ್ಯದ ವಿವಿಧೆಡೆ ಸಂಭವಿಸಿದ ಬಸ್ ಅಪಘಾತದಲ್ಲಿ ಒಟ್ಟು 22 ಜನ ಗಂಭೀರವಾಗಿ ಗಾಯಗೊಂಡಿರುವ ಘಟನೆ ನಡೆದಿದೆ. ಉತ್ತರ ಕನ್ನಡದಲ್ಲಿ ಮರಕ್ಕೆ ಬಸ್ ಡಿಕ್ಕಿಯಾಗಿ 20 ಜನ ಗಾಯಗೊಂಡಿದ್ದರೆ, ಸೈಕಲ್‌ನಲ್ಲಿ ತೆರಳುತ್ತಿದ್ದ ವೇಳೆ ಬಸ್ ಗುದ್ದಿದ ಪರಿಣಾಮ ಕಲಬುರಗಿಯಲ್ಲಿ ವಿದ್ಯಾರ್ಥಿಯ ಕೈ ಸಂಪೂರ್ಣ ಛಿದ್ರವಾಗಿದೆ. ಬಸ್ ಡಿಕ್ಕಿಯಾಗಿ ಹಾವೇರಿಯಲ್ಲೂ ಓರ್ವ ವಿದ್ಯಾರ್ಥಿಗೆ ಗಂಭೀರ ಗಾಯಗಳಾಗಿವೆ. ಓವರ್‌ಟೇಕ್ ವೇಳೆ ಚಾಲಕನ ನಿಯಂತ್ರಣ ತಪ್ಪಿ ಮರಕ್ಕೆ ಬಸ್ ಗುದ್ದಿದ ಪರಿಣಾಮ 20ಕ್ಕೂ ಹೆಚ್ಚು ಜನರು ಗಂಭೀರ ಗಾಯಗೊಂಡಿರುವ ಘಟನೆ ಉತ್ತರ ಕನ್ನಡ ಜಿಲ್ಲೆಯ ಹಳಿಯಾಳ ತಾಲೂಕಿನ ಬಾನಸಗೇರಿ ಗ್ರಾಮದ ಮೊರಾರ್ಜಿ ಹಾಸ್ಟೆಲ್ ಬಳಿ ನಡೆದಿದೆ. ಕೆ ಎ ಸ್ ಆರ್‌ಟಿಸಿ ಬಸ್ ಚಾಲಕ, 8 ವಿದ್ಯಾರ್ಥಿನಿಯರು, ಇಬ್ಬರು ಶಾಲಾ ಮಕ್ಕಳು, ಇಬ್ಬರು ಮಹಿಳೆಯರು ಮತ್ತು ನಿರ್ವಾಹಕ ಸೇರಿ ಹಲವರು ಘಟನೆಯಲ್ಲಿ ಗಾಯಗೊಂಡಿದ್ದಾರೆ. ಓವರ್‌ಟೇಕ್ ಮಾಡುವ ಸಂದರ್ಭ ಮುಂದಿನಿಂದ ಕಾರು ಬಂದ ಹಿನ್ನೆಲೆ ಅಪಘಾತ ತಪ್ಪಿಸಲು ಚಾಲಕ ಯತ್ನಿಸಿದ್ದಾನೆ. ಈ ವೇಳೆ ನಿಯಂತ್ರಣ ಕಳೆದುಕೊಂಡ ಬಸ್ ಮರಕ್ಕೆ ಹೋಗಿ ಗುದ್ದಿದೆ. ಗಾಯಾಳುಗಳನ್ನು ಹಳಿಯಾಳ ತಾಲೂಕು ಆಸ್ಪತ್ರೆಗೆ ದಾಖಲಿಸಿ ಚಿಕಿತ್ಸೆ ನೀಡಲಾಗ್ತಿದೆ. ವಿದ್ಯಾರ್ಥಿ ಬಲಗೈ ಛಿದ್ರ ಸೈಕಲ್‌ನಲ್ಲಿ ತೆರಳುತ್ತಿದ್ದ ವಿದ್ಯಾರ್ಥಿಗೆ ಕೆಕೆಆರ್‌ಟಿಸಿ ಬಸ್ ಡಿಕ್ಕಿಯಾಗಿರುವ ಘಟನೆ ಕಲಬುರಗಿಯ ಜೇವರ್ಗಿ ಪಟ್ಟಣದ ವಿಜಯಪುರ ರಸ್ತೆಯಲ್ಲಿ ನಡೆದಿದೆ. ಘಟನೆಯಲ್ಲಿ ವಿದ್ಯಾರ್ಥಿ ಇರ್ಫಾನ್ ದವಲಸಾಬ್(15)ಗೆ ಗಂಭೀರ ಗಾಯಗೊಂಡಿದ್ದು, ವಿದ್ಯಾರ್ಥಿ ಅಬ್ದುಲ್ ಕಲಾಂ ಆಜಾದ್ ಶಾಲೆಯಲ್ಲಿ 9ನೇ ತರಗತಿ ಓದುತ್ತಿದ್ದಾನೆ ಎಂಬ ಮಾಹಿತಿ ಸಿಕ್ಕಿದೆ. ಘಟನೆ ಬಗ್ಗೆ ಜೇವರ್ಗಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

**ಪರೀಕ್ಷೆಗೆ ಹೊರಟಿದ್ದವನಿಗೆ ಗುದ್ದಿದ ಬಸ್**

ಬಸ್ ಗುದ್ದಿದ ಪರಿಣಾಮ ಪರೀಕ್ಷೆ ಬರೆಯಲು ಕಾಲೇಜಿಗೆ ಹೊರಟಿದ್ದ ವಿದ್ಯಾರ್ಥಿ ಗಂಭೀರವಾಗಿ ಗಾಯಗೊಂಡಿರುವ ಘಟನೆ ಹಾವೇರಿ ನಗರ ಬಸ್ ನಿಲ್ದಾಣದಲ್ಲಿ ನಡೆದಿದೆ. ಹಾವೇರಿ ತಾಲ್ಲೂಕಿನ ಕೊಣನತಂಬಿಗಿ ಗ್ರಾಮದ ವಿದ್ಯಾರ್ಥಿ ರೋಹಿತ್ ಕೆಸರಳ್ಳಿ ಬೆನ್ನಿಗೆ ಮತ್ತು ತಲೆಗೆ ಘಟನೆಯಲ್ಲಿ ಗಂಭೀರ ಗಾಯಗಳಾಗಿವೆ. ನಗರದ ಹಾಸ್ಟೆಲ್‌ನಲ್ಲಿ ವಾಸವಿದ್ದು, ಸರಕಾರಿ ಪದವಿ ಪೂರ್ವ ಕಾಲೇಜಿನಲ್ಲಿ ಈತ ವ್ಯಾಸಂಗ ಮಾಡುತ್ತಿದ್ದ ಎನ್ನಲಾಗಿದೆ. ಗಾಯಾಳುವಿಗೆ ಹಾವೇರಿ ಜಿಲ್ಲಾ ಆಸ್ಪತ್ರೆಯಲ್ಲಿ ಚಿಕಿತ್ಸೆ ನೀಡಲಾಗುತ್ತಿದೆ.

## ಬಾಯ್ಲರ್ ಸ್ಫೋಟ: ಚಿಕಿತ್ಸೆ ಫಲಿಸದೆ ನಾಲ್ವರು ಕಾರ್ಮಿಕರು ಸಾವು



**ಬೆಳಗಾವಿ:** ಜಿಲ್ಲೆಯ ಬೈಲಹೊಂಗಲ ತಾಲೂಕಿನ ಮರಕುಂಬಿ ಗ್ರಾಮದ ಬಳಿಯ ಇನಾಮ್‌ದಾರ್ ಸಕ್ಕರೆ ಕಾರ್ಖಾನೆಯಲ್ಲಿ ಬಾಯ್ಲರ್ ಸ್ಫೋಟ ಪ್ರಕರಣಕ್ಕೆ ಸಂಬಂಧಿಸಿದಂತೆ ಚಿಕಿತ್ಸೆ ಫಲಿಸದೆ ಖಾಸಗಿ ಆಸ್ಪತ್ರೆಯಲ್ಲಿ ಇಂದು ಒಂದೇ ದಿನ ನಾಲ್ವರು ಕಾರ್ಮಿಕರು ಸಾವನ್ನಪ್ಪಿದ್ದಾರೆ ಆ ಮೂಲಕ ಮೃತಪಟ್ಟವರ ಸಂಖ್ಯೆ 7ಕ್ಕೆ ಏರಿಕೆ ಆಗಿದೆ. ಮುರಗೋಡ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಪ್ರಕರಣ ನಡೆದಿದೆ. ಮೃತರ ಸಂಖ್ಯೆ 7ಕ್ಕೆ ಏರಿಕೆ ಅಕ್ಷಯ ತೋಪಡೆ, ದೀಪಕ್ ಮುನವಳ್ಳಿ, ಸುದರ್ಶನ ಬನೋಶಿ, ಬೈಲಹೊಂಗಲ ತಾಲೂಕಿನ ಅರವಳ್ಳಿ ನಿವಾಸಿ ಮಂಜುನಾಥ ಮಡಿವಾಳಪ್ಪ ಕಾಜಗಾರ್, ಗೋಕಾಕ್ ತಾಲೂಕಿನ ಗೊಡಚಿನಮಲ್ಕಿ ಗ್ರಾಮದ ನಿವಾಸಿ ಭರತೇಶ ಸಾರವಾಡಿ, ತೇರದಾಳ ಅಥಣಿ ಪಟ್ಟಣದ ನಿವಾಸಿ ಮಂಜುನಾಥ್ ತೇರದಾಳ, ಬಾಗಲಕೋಟ ಜಿಲ್ಲೆಯ ಮರೆಗುದ್ದಿ ಗ್ರಾಮದ ಗುರುಪಾದಪ್ಪ ತಮ್ಮನ್ನವರ್ ಮೃತ ದುರ್ದೈವಿಗಳು. ಬೆಳಗಾವಿ ಜಿಲ್ಲೆಯ ಬೈಲಹೊಂಗಲ ತಾಲೂಕಿನ ಮರಕುಂಬಿ ಗ್ರಾಮದ ಬಳಿಯ ಇನಾಮ್ ದಾರ್ ಸಕ್ಕರೆ ಕಾರ್ಖಾನೆಯಲ್ಲಿ ಬುಧವಾರ ಬಾಯ್ಲರ್ ಸ್ಫೋಟಗೊಂಡು ಎಂಟು ಜನರಲ್ಲಿ ಮೂವರು ಕಾರ್ಮಿಕರು ಸಾವನ್ನಪ್ಪಿದ್ದರು. ವಿಕ್ರಮ ಇನಾಮದಾರ್ ಎಂಬುವವರಿಗೆ ಕಾರ್ಖಾನೆ ಸೇರಿದೆ. ನಿನ್ನೆ ಕಾರ್ಖಾನೆ ವಾಲ್ ದುರಸ್ತಿ ಮಾಡುವಾಗ ವಾಲ್ ಸ್ಫೋಟಗೊಂಡು ಕುದಿಯುವ ಕಬ್ಬಿನ ಹಾಲು ಕಾರ್ಮಿಕರ ಮೈಮೇಲೆ ಬಿದ್ದಿತ್ತು. ಗಂಭೀರವಾಗಿ ಗಾಯಗೊಂಡವರನ್ನು ಬೆಳಗಾವಿ ಖಾಸಗಿ ಆಸ್ಪತ್ರೆಗೆ ದಾಖಲಿಸಲಾಗಿತ್ತು. ಫಲಿಸದೆ ಒಬ್ಬೊಬ್ಬರೇ ಕಾರ್ಮಿಕರು ಸಾವನ್ನಪ್ಪಿದ್ದಾರೆ. ಸರ್ಕಾರ ಹಾಗೂ ಕಾರ್ಖಾನೆ ಆಡಳಿತ ಮಂಡಳಿ ವಿರುದ್ಧ ತೀವ್ರ ಆಕ್ರೋಶ

ಸಂಬಂಧಿಸಿದಂತೆ ಬೆಳಗಾವಿಯಲ್ಲಿ ಮೃತ ಕಾರ್ಮಿಕರ ಕುಟುಂಬಸ್ಥರು ರಾಜ್ಯ ಸರ್ಕಾರದ ವಿರುದ್ಧ ತೀವ್ರ ಆಕ್ರೋಶ ವ್ಯಕ್ತಪಡಿಸಿದ್ದಾರೆ. ಕಾರ್ಖಾನೆ ಸ್ಪಂದಿಸುತ್ತಿಲ್ಲ, ಸರ್ಕಾರ ಕೂಡ ಯಾವುದೇ ಪರಿಹಾರ ನೀಡಿಲ್ಲ ಎಂದು ಸರ್ಕಾರ ಹಾಗೂ ಕಾರ್ಖಾನೆ ಆಡಳಿತ ಮಂಡಳಿ ವಿರುದ್ಧ ತೀವ್ರ ಆಕ್ರೋಶ ಹೊರಹಾಕಿದ್ದಾರೆ.

## ಬಂಡೆಮಠದಲ್ಲಿ ಜ.11, 12 ಧರ್ಮ ಜಾಗೃತಿಸಮಾವೇಶ



**ಯಶವಂತಪುರ** : ಕೆಂಗೇರಿ ಉಪ ನಗರದ ಏಕದಳ ಬಿಲ್ವ ಬಂಡೇಮಠದ ಪ್ರಾಂಗಣದಲ್ಲಿ ಶ್ರೀಮದ್ ರಂಭಾಪುರಿ ಜಗದ್ಗುರು ಸಾರೋಟೋತ್ಸವ-ಇಷ್ಟಲಿಂಗ ಮಹಾಪೂಜೆ, ಶಿವದೀಕ್ಷೆ ಹಾಗೂ ಜನ ಜಾಗೃತಿ ಧಾರ್ಮಿಕ ಸಮಾವೇಶ ನಡೆಯಲಿದ್ದು ಹೆಚ್ಚಿನ ಸಂಖ್ಯೆಯಲ್ಲಿ ಸದ್ಭಕ್ತರು ಪಾಲ್ಗೊಂಡು ಯಶಸ್ವಿಗೊಳಿಸಿ ಎಂದು ಏಕದಳ ಬಿಲ್ವ ಬಂಡೇಮಠದ ಶ್ರೀ ಸಚ್ಚಿದಾನಂದ ಸ್ವಾಮೀಜಿ ಮನವಿ ಮಾಡಿದರು. ಮಠದಲ್ಲಿ ಕರೆದಿದ್ದ ಸುದ್ದಿಗೋಷ್ಠಿಯಲ್ಲಿ ಸ್ವಾಮೀಜಿ ಕಾರ್ಯಕ್ರಮದ ಬಗ್ಗೆ ಮಾಹಿತಿ ನೀಡಿದರು. ಶ್ರೀ ಮಠ, ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭಾ (ರಿ), ಹಾಗೂ ಸಮಾಜದ ಸದ್ಭಕ್ತರ ಸಹಯೋಗದಲ್ಲಿ ವಿಜೃಂಭಣೆಯ ಧಾರ್ಮಿಕ ಕಾರ್ಯಕ್ರಮ ನಡೆಯಲಿದೆ ಎಂದರು

ಇದೇ ಜ.11 ಭಾನುವಾರ ಸಂಜೆ 4 ಗಂಟೆಗೆ ಬಾಳೆಹೊನ್ನೂರಿನ ಶ್ರೀಮದ್ ರಂಭಾಪುರಿ ಜಗದ್ಗುರು ಡಾ. ವೀರಸೋಮೇಶ್ವರ ರಾಜದೇಶಿ ಕೇಂದ್ರ ಸ್ವಾಮೀಜಿ ಅವರನ್ನು ಕೆಂಗೇರಿಯ ಶ್ರೀ ಜಗದ್ಗುರು ರೇಣುಕಾಚಾರ್ಯ ವಿದ್ಯಾಸಂಸ್ಥೆಯಿಂದ ಶ್ರೀ ಏಕದಳ ಬಿಲ್ವ ಬಂಡೆಮ ಠದವರೆಗೆ ಸಾರೋಟಿನಲ್ಲಿ ಕರೆತರಲಾಗುವುದು. ಅಂತೆಯೇ ಜ-12ರ ಸೋಮವಾರ ಬೆಳಿಗ್ಗೆ 7 ಗಂಟೆಗೆ ರಂಭಾಪುರಿ ಶ್ರೀಗಳಿಂದ ಇಷ್ಟಲಿಂಗ ಮಹಾಪೂಜೆ ಹಾಗೂ ಶಿವ ದೀಕ್ಷೆ 11 ಗಂಟೆಗೆ ಧರ್ಮ ಜಾಗೃತಿ ಸಮಾವೇಶ ನಡೆಯಲಿದೆ ಎಂದರು.

ಕಾರ್ಯಕ್ರಮದಲ್ಲಿ ನೊಣವಿನಕೆರೆಯ ಕಾಡಸಿದ್ದೇಶ್ವರ ಮಠದ ಡಾ.ಕರಿವೃಷಭ ದೇಶಿಕೇಂದ್ರ ಶಿವಯೋಗಿ ಸ್ವಾಮೀಜಿ ಸೇರಿ ವಿವಿಧ ಮಠಾಧೀಶರು, ಕೇಂದ್ರ ಸಚಿವೆ ಶೋಭಾ ಕರಂದ್ಲಾಜೆ, ಅರಣ್ಯ ಸಚಿವ ಈಶ್ವರ್ ಖಂಡ್ರೆ , ಶಾಸಕ ಎಸ್.ಟಿ ಸೋಮಶೇಖರ್ ಸಹಿತ ಹಲವು ಗಣ್ಯರು ಭಾಗವಹಿಸಲಿದ್ದಾರೆ. ಮಾಜಿ ಮುಖ್ಯಮಂತ್ರಿ ಬಿಎಸ್ ಯಡಿಯೂರಪ್ಪ ಅವರಿಗೆ

ಗೌರವ ಗುರುರಕ್ಷೆ ನಡೆಯಲಿದೆ ಎಂದರು ಪತ್ರಿಕಾಗೋಷ್ಠಿಯಲ್ಲಿ ಕನಕಪುರ ಚಿಕ್ಕಕಲ್ಲಬಾಳುಮಠದ ಶ್ರೀ ಶಿವಾನಂದ ಶಿವಾಚಾರ್ಯ ಸ್ವಾಮೀಜಿ, ರಾಜ್ಯ ಬಿಜೆಪಿ ರೈತ ಮೋರ್ಚಾ ಉಪಾಧ್ಯಕ್ಷ ಎಂ.ರುದ್ರೇಶ್, ಅಖಿಲ ಭಾರತ ವೀರಶೈವ ಮಹಾಸಭಾ ಅಧ್ಯಕ್ಷ ಪಂಚಾಕ್ಷರಿ, ಮುಖಂಡರಾದ ಮೋಹನ್ ಕುಮಾರ್, ಶಶಿಕುಮಾರ್, ಮಂಜುನಾಥಯ್ಯ ಡಾ. ಅನುಪಮಾ ಪಂಚಾಕ್ಷರಿ, ಸೂಲಿವಾರ ಬಸವರಾಜು, ಮಹದೇವ್ ಎನ್.ಎಸ್ ರುದ್ರೇಶ್, ಪ್ರಭಾಕರ್ ಲಾಡ್, ಪರಮೇಶಿ, ಜಗದೀಶ್, ರಮೇಶ್ ಸೇರಿದಂತೆ ಹಲವರು ಉಪಸ್ಥಿತರಿದ್ದರು.

## ಸ್ವದೇಶಿ, ಭಾರತದ ದೂರದರ್ಶಿತ್ವದ ಮತ್ತು ಸಂಕಲ್ಪಶಕ್ತಿಯ ಸಂಕೇತ: ಡಾ.ವಿಶ್ವ ಸಂತೋಷ ಭಾರತಿ ಶ್ರೀ ಪಾದರು



**ಪೀಣ್ಯ ದಾಸರಹಳ್ಳಿ:** ಸ್ವದೇಶಿ, ಭಾರತದ ದೂರದರ್ಶಿತ್ವದ ಮತ್ತು ಸಂಕಲ್ಪಶಕ್ತಿಯ ಸಂಕೇತ. ಸ್ವದೇಶಿ ಮೇಳ ಸ್ವಾಭಿಮಾನದ ಶಕ್ತಿಯ ಪ್ರತೀಕ. ಇಂತಹ ಮೇಳಗಳನ್ನು ಆಯೋಜಿಸುವ ಮೂಲಕ ಭಾರತದ ಅಂತಃಸತ್ವವನ್ನು ಜಾಗೃತಗೊಳಿಸುವ ಕೆಲಸ ಸ್ವದೇಶಿ ಜಾಗರಣ ಮಂಚ್ ಮಾಡುತ್ತಿದೆ ಎಂದು ಶ್ರೀ ಬಾರ್ಕೂರು ಮಹಾಸಂಸ್ಥಾನ ಮಠದ ಪೀಠಾಧ್ಯಕ್ಷ ಶ್ರೀ ವಿದ್ಯಾ ವಾಚಸ್ಪತಿ ಡಾ.ವಿಶ್ವ ಸಂತೋಷ ಭಾರತಿ ಶ್ರೀ ಪಾದರು ಹೇಳಿದರು. ಬಾಗಲಗುಂಟೆಯ ಎಂ ಇ ಐ ಮೈದಾನದಲ್ಲಿ ಸ್ವದೇಶಿ ಜಾಗರಣ ಮಂಚ್ ವತಿಯಿಂದ ಆಯೋಜಿಸಲಾದ ಸ್ವದೇಶಿ ಮೇಳದ ಉದ್ಘಾಟನೆ ಸಮಾರಂಭದಲ್ಲಿ ಅವರು ಮಾತನಾಡಿದರು. ಭಾರತ ಸಂಸ್ಕಾರವನ್ನು, ಯೋಜನೆ, ಯೋಚನೆಯನ್ನು ಜಗತ್ತಿಗೆ ಕಲಿಸಿಕೊಟ್ಟಂತಹ ರಾಷ್ಟ್ರ. ಆದರೆ ವ್ಯಾಪಾರದ ಹೆಸರಲ್ಲಿ ಈ ನಾಡಿಗೆ ಆಗಮಿಸಿದ ಪಾಶ್ಚಾತ್ಯರು ಇಲ್ಲಿನ ಸಂಸ್ಕೃತಿಗೆ ಧಕ್ಕೆ ತಂದರು. ಇಲ್ಲಿನ ಸ್ವಾಭಿಮಾನದ ಆಧಾರವಾಗಿದ್ದ ಕರಕುಶಲ ವ್ಯಾಪಾರವನ್ನು ಧ್ವಂಸಗೊಳಿಸಿದರು. ಮುಖ್ಯವಾಗಿ ನಮ್ಮ ಯೋಚನೆಯೇ ತಪ್ಪೆಂದರು. ಅದನ್ನೇ ನಂಬಿಕೊಂಡು ಆದಂತಹ ಅವಾಂತರಗಳಿಂದ ಹೊರಗೆ ಬರಬೇಕು. ರಾಷ್ಟ್ರ ಮುಖ್ಯ ಎನ್ನುವ ಭಾವ ನಮ್ಮಲ್ಲಿ ಜಾಗೃತವಾ ಗಬೇಕು" ಸ್ವಾಮೀಜಿಗಳು ಹೇಳಿದರು.

ಮಾಜಿ ಮುಖ್ಯಮಂತ್ರಿ ಡಿ.ವಿ. ಸದಾನಂದ ಗೌಡ ಮಾತನಾಡಿ,' ಸ್ವಾತಂತ್ರ್ಯ ಹೋರಾಟದ ಸಂದರ್ಭದಲ್ಲಿ ಸ್ವದೇಶಿ ಆಂದೋಲನದ ಮೂಲಕ ಮೂಡಿದ ರಾಷ್ಟ್ರಭಾವದ ಜಾಗರಣ ಸ್ವಾತಂತ್ರ್ಯದ ನಂತರದಲ್ಲಿ ಮತ್ತೆ ಹಿನ್ನೆಲೆಗೆ ಸರಿದಿತ್ತು. ಆದರೆ ಪ್ರಸ್ತುತ ನಾವು ಯಾರ ಗುಲಾಮರೂ ಅಲ್ಲ ಎನ್ನುವ ನಾಯಕತ್ವ ಬಂದ ಪರಿಣಾಮವಾಗಿ ಭಾರತದ ಕರ್ತೃತ್ವ ಶಕ್ತಿಯ ಪರಿಚಯವನ್ನು ಜಗತ್ತಿಗೆ ಮಾಡಿಕೊಡುತ್ತಿದೆ. ನಮ್ಮ ಭಾರತೀಯ ಪದ್ಧತಿಗಳನ್ನು ಮರಳಿ ಮುನ್ನೆಲೆಗೆ ತರುವ ಮೂಲಕ ಸದ್ದುಗದ್ದಲವಿಲ್ಲದೆ ಆತ್ಮ ನಿರ್ಭರ ಭಾರತದ ಸಂಕಲ್ಪ ಶಕ್ತಿ ಜಗತ್ತನ್ನು ಆವರಿಸಿಕೊಂಡಿದೆ 'ಎಂದು ತಿಳಿಸಿದರು

ಖ್ಯಾತ ವಾಗ್ಮಿ ಚಿಂತಕ ಚಕ್ರವರ್ತಿ ಸೂಲಿಬೆಲೆ ಮಾತನಾಡಿ "ಸ್ವಭಾಷಾ, ಸ್ವಭೂಷಾ, ಸ್ವದೇಶಿ, ಸ್ವಧರ್ಮ ವಿದ್ದಾಗ ಮಾತ್ರ ಸ್ವರಾಜ್ಯಕ್ಕೆ ಪರಿಪೂರ್ಣವಾದ ಅರ್ಥ ಬರುತ್ತದೆ ಎಂದು ತಿಲಕರು, ಅರವಿಂದರಾದಿಯಾಗಿ ಅನೇಕ ಹಿರಿಯರು ತಿಳಿಸಿದ್ದಾರೆ. ವಿವಿಧತೆಯಿಂದ ಕೂಡಿದ ಸಂಸ್ಕೃತಿ ನಮ್ಮದು. ಇಲ್ಲಿನ ಸಾಂಸ್ಕೃತಿಕ ನೆಲಗಟ್ಟಿನಲ್ಲಿ ನಿರ್ಮಾಣವಾದ ಉದ್ಯಮಗಳಿಗೆ ಬ್ರ್ಯಾಂಡಿಂಗ್ ನೀಡುವ ಅವಶ್ಯಕತೆ ಇದೆ" ಎಂದು ಅಭಿಪ್ರಾಯಪಟ್ಟರು.

ಅಂ ದು ಜಾಗತೀಕರಣ, ಉದಾರೀಕರಣ, ಖಾಸಗೀಕರಣದ ಕುರಿತು ಮಾತನಾಡುತ್ತಿದ್ದ ಸರ್ಕಾರಗಳು ಇಂದು ಇಂದು ವೋಕಲ್ ಫಾರ್ ಲೋಕಲ್, ಆತ್ಮನಿರ್ಭರ ಭಾರತದ ಕುರಿತು ಮಾತನಾಡುತ್ತಿದೆ. ಇದರ ಪರಿಣಾಮವಾಗಿ ಯುನಿಕಾರ್ನ್ ಗಳ ಸಂಖ್ಯೆ ಜಾಸ್ತಿಯಾಗಿದೆ. ಆತ್ಮನಿರ್ಭರದ ಕಲ್ಪನೆಯ ಮುಲಕ ಜಗತ್ತಿನ ನಂಬರ್ ವನ್ ರಾಷ್ಟ್ರ ನಾವಾಗಬೇಕು. 2047ರಲ್ಲಿ ವಿಕಸಿತ ಭಾರತವಾಗುವುದಕ್ಕೆ ನಾವೆಲ್ಲರೂ ಕೈಗೂಡಿಸಬೇಕು" ಎಂದು ಹೇಳಿದರು.

ಶಾಸಕ ಎಸ್. ಮುನಿರಾಜು ದೊಡ್ಡ ದೊಡ್ಡ ಕಂಪೆನಿಗಳ ಜೊತೆಗೆ ಸ್ವದೇಶಿ ವಸ್ತುಗಳು ಸ್ಪರ್ಧಿಸಬೇಕಾದರೆ ರಾಷ್ಟ್ರದ ವ್ಯಾಪಾರ ಕ್ಷೇತ್ರದಲ್ಲಿ ಇರಬೇಕಾದ ವಾತಾವರಣವನ್ನು ನಿರ್ಮಿಸುವಲ್ಲಿ ಸ್ವದೇಶಿ ಜಾಗರಣ ಮಂಚ್ ನ ಜವಾಬ್ದಾರಿ ಎಷ್ಟಿದೆಯೋ ಅಷ್ಟೇ ಸರ್ಕಾರದ್ದೂ ಇದೆ. ಕೋವಿಡ್ ಸಂದರ್ಭದಲ್ಲಿ ಪ್ರಧಾನಿ ನರೇಂದ್ರ ಮೋದಿಯವರು ಕೊಟ್ಟ ಆತ್ಮನಿರ್ಭರದ ಕರೆ ಸ್ವದೇಶಿತನಕ್ಕೆ ಹೊಸ ಹುರುಪನ್ನು ನೀಡಿದೆ' ಎಂದರು.

ಸ್ವದೇಶಿ ಜಾಗರಣ ಮಂಚ್ ಸಂಯೋಜಕ ರವೀಂದ್ರ ಪೈ, ಸಹ ಸಂಯೋಜಕ ಅಶ್ವಿನ್ ಮಹಾಜನ್, ಜಾರ್ಖಂಡ್ ಮುಖ್ಯಸ್ಥ ಸಚೀಂದ್ರ ಬಿರಿಯಾರ್, ಸ್ವದೇಶಿ ಮೇಳದ ಸಂಯೋಜಕ ರವೀಂದ್ರ ಪೈ, ಸಹ ಸಂಯೋಜಕ ದಾನಪ್ಪ, ಸಂಘಟಕ ಭರತ್ ಸೌಂದರ್ಯ , ಸಹಸಂಘಟಕ ಲಕ್ಷ್ಮಿ ವೆಂಕಟೇಶ್, ಸಂಚಾಲಕ ವಸಂತ ಮೂರ್ತಿ ಮುಂತಾದವರಿದ್ದರು.

## ಅಪ್ರಾಪ್ತೆಯ ಮೇಲಿನ ಅತ್ಯಾಚಾರ: ಆರೋಪಿಗಳಲ್ಲಿ ಯೂಟ್ಯೂಬರ್ ಮತ್ತು ಪೊಲೀಸ್



**ಕಾನ್ಪುರ:** ಉತ್ತರ ಪ್ರದೇಶದ ಕಾನ್ಪುರದಲ್ಲಿ 14 ವರ್ಷದ ಬಾಲಕಿ ಯನ್ನು ಅಪಹರಿಸಿ ಸಾಮೂಹಿಕ ಅತ್ಯಾ ಚಾರ ನಡೆಸಲಾಗಿದೆ ಎಂದು ಆರೋಪಿ ಸಲಾಗಿದೆ. ಈ ಅಪ ರಾಧವೆಸಗಿದ ಯೂಟ್ಯೂಬರ್ ಒಬ್ಬನನ್ನು ಬಂಧಿ ಸಲಾಗಿದೆ. ಇನ್ನೋರ್ವ ಆರೋಪಿ ಯಾದ ಪೊಲೀಸ್ ಸಬ್ ಇನ್ಸ್‌ಪೆಕ್ಟರ್‌ಗಾಗಿ ಹುಡುಕಾಟ ನಡೆಸಲಾಗುತ್ತಿದೆ. ಹಿರಿಯ ಪೊಲೀಸ್ ಅಧಿಕಾರಿಗಳನ್ನು ಕೆಲ ಸದಿಂದ ಅಮಾ ನತುಗೊಳಿಸಲಾಗಿದೆ. ಸ್ಥಳೀಯ ಪೊಲೀಸರು ಈ ಕೃತ್ಯವನ್ನು ಮುಚ್ಚಿಹಾಕಿದ್ದಾರೆ ಎಂದು ಸಂತ್ರಸ್ತೆಯ ಕುಟುಂಬ ಆರೋಪಿಸಿದೆ. ಎಲ್ಲಾ ತಪ್ಪಿತಸ್ಥರ ವಿರುದ್ಧ ಕಠಿಣ ಕ್ರಮ ಕೈಗೊ ಳ್ಳುವ ಭರವಸೆ ಯೊಂದಿಗೆ ತನಿಖೆಗಳು ನಡೆಯುತ್ತಿವೆ.

ಈ ಪ್ರಕರಣದಲ್ಲಿ ಸತ್ಯಗಳನ್ನು ತಪ್ಪಾಗಿ ನಿರೂಪಿಸಿದ ಆರೋಪದ ಮೇಲೆ ಕಾನ್ಪುರ ಪೊಲೀಸ್ ಆಯುಕ್ತ ರಘುಬೀರ್ ಲಾಲ್ ಅವರು ಉಪ ಪೊಲೀಸ್ ಆಯುಕ್ತ (ಪಶ್ಚಿಮ) ದಿನೇಶ್ ಚಂದ್ರ ತ್ರಿಪಾಠಿ ಅವರನ್ನು ವರ್ಗಾಗೊಳಿಸಿದ್ದಾರೆ. ಸಚೇಂಡಿ ಸ್ಟೇಷನ್ ಹೌಸ್ ಅಧಿಕಾರಿ ವಿಕ್ರಮ್ ಸಿಂಗ್ ಅವರನ್ನು ಅಮಾನತು ಗೊಳಿಸಲಾಗಿದೆ. ಕಾನ್ಪುರದ ಸಚೆಂಡಿ ಪ್ರದೇಶದಲ್ಲಿ 14 ವರ್ಷದ ಬಾಲಕಿ ಯನ್ನು ಅಪಹರಿಸಿ ಸಾಮೂಹಿಕ ಅತ್ಯಾಚಾರ ನಡೆಸಲಾಗಿತ್ತು. 7ನೇ ತರ ಗತಿಯ ವಿದ್ಯಾರ್ಥಿ ನಿಯನ್ನು ಸೋಮವಾರ ರಾತ್ರಿ 10 ಗಂಟೆ ಸುಮಾರಿಗೆ ಮಹೀಂದ್ರಾ ಸ್ಕಾರ್ಪಿ ಯೋದಲ್ಲಿ ಅಪಹರಿಸಲಾಗಿತ್ತು. ಆಕೆಯನ್ನು ಸ್ಕಾರ್ಪಿಯೋದಲ್ಲೇ ರೈಲ್ವೆ ಹಳಿಯ ಬಳಿಯ ದೂರದ ಸ್ಥಳಕ್ಕೆ ಕರೆದೊಯ್ಯಲಾಯಿತು. ಅಲ್ಲಿ ಸುಮಾರು ಎರಡು ಗಂಟೆಗಳ ಕಾಲ ಆಕೆಯ ಮೇಲೆ ಅತ್ಯಾಚಾರ ನಡೆಸಿ, ನಂತರ ಆಕೆಯ ಮನೆಯ ಹೊರಗೆ ಎಸೆಯಲಾಗಿತ್ತು. ಆಕೆಯ ಹೇಳಿಕೆಯ ಆಧಾರದ ಮೇಲೆ, ಸಬ್-ಇನ್ಸ್‌ಪೆಕ್ಟರ್ ಅಮಿತ್ ಕುಮಾರ್ ಮೌರ್ಯ ಮತ್ತು ಯೂಟ್ಯೂಬರ್ ಶಿವಬರನ್ ಯಾದವ್ ವಿರುದ್ಧ ಕೇಸ್ ದಾಖಲಿಸಲಾಗಿದೆ. ಶಿವಬರನ್ ಯಾದವ್ ಅವರನ್ನು ಬಂಧಿಸಲಾಗಿದೆ. ಪರಾರಿಯಾಗಿರುವ ಎಸ್‌ಐ ಅನ್ನು ಬಂಧಿಸಲು ಪೊಲೀಸರು 4 ತಂಡಗಳನ್ನು ರಚಿಸಿದ್ದಾರೆ.

## ಪುರುಷ ಆಯೋಗ ಸ್ಥಾಪನೆಗೆ ಆಗ್ರಹ



**ಬೆಂಗಳೂರು** :ಕರ್ನಾಟಕ ರಾಜ್ಯದಲ್ಲಿ ಪುರುಷರು ಎದುರಿಸುತ್ತಿರುವ ಸಾಮಾಜಿಕ, ಮಾನಸಿಕ ಹಾಗೂ ಕಾನೂನು ಸಮಸ್ಯೆಗಳ ಪರಿಹಾರಕ್ಕಾಗಿ ಪ್ರತ್ಯೇಕ ಪುರುಷ ಆಯೋಗ ಸ್ಥಾಪನೆ ಅಗತ್ಯವಿದೆ ಎಂದು ಕರ್ನಾಟಕ ರಾಜ್ಯ ಪುರುಷರ ಕಲ್ಯಾಣ ಮತ್ತು ರಕ್ಷಣಾ ಸಮಿತಿ ತಂಡವು ಮಾನ್ಯ ವಿಧಾನ ಪರಿಷತ್ ಸದಸ್ಯರಾದ ಕೆ.ಎ. ತಿಪ್ಪೇಸ್ವಾಮಿ ಅವರನ್ನು ಭೇಟಿ ಮಾಡಿ ಮನವಿ ಸಲ್ಲಿಸಿತು.

ಈ ಸಂದರ್ಭದಲ್ಲಿ ಸಮಿತಿಯ ಅಧ್ಯಕ್ಷರಾದ ರಾಜ್ಯ ಪ್ರಶಸ್ತಿ ವಿಜೇತ ಆನಂದ್ ಸಿ. ತಿರುಮಲ ಮಾತನಾಡಿ,"ಸಮಾಜದಲ್ಲಿ ಪುರುಷರು ಸಮಸ್ಯೆ ಇಲ್ಲದ ವರ್ಗ ಎಂದು ಭಾವಿಸಲಾಗಿದೆ. ಆದರೆ ಕುಟುಂಬ ಕಲಹ, ಮಾನಸಿಕ ಒತ್ತಡ, ಕಾನೂನುಗಳ ದುರ್ಬಳಕೆ ಹಾಗೂ ಆತ್ಮಹತ್ಯೆ ಪ್ರಕರಣಗಳು ಹೆಚ್ಚುತ್ತಿರುವುದು ಗಂಭೀರ ವಿಚಾರ. ಈ ಎಲ್ಲ ಸಮಸ್ಯೆಗಳನ್ನು ಪರಿಶೀಲಿಸಿ ಪರಿಹಾರ ನೀಡಲು ಪುರುಷ ಆಯೋಗ ಅನಿವಾರ್ಯ," ಎಂದರು.

ಸಮಿತಿಯ ಕಾರ್ಯಾಧ್ಯಕ್ಷ ವಕೀಲರಾದ ಲಯನ್ ಎಲ್. ಶ್ರೀಧರ್ ಮಾತನಾಡಿ, "ಇತ್ತೀಚಿನ ವರ್ಷಗಳಲ್ಲಿ ಪುರುಷರ ಮೇಲಿನ ಅನ್ಯಾಯ ಪ್ರಕರಣಗಳು ಹೆಚ್ಚಾಗುತ್ತಿವೆ. ಆದರೆ ಅವುಗಳನ್ನು ಕೇಳುವ, ಅಧ್ಯಯನ ಮಾಡುವ ಮತ್ತು ಸರ್ಕಾರಕ್ಕೆ ಶಿಫಾರಸು ಮಾಡುವ ವ್ಯವಸ್ಥೆಯೇ ಇಲ್ಲ. ಈ ಕೊರತೆಯನ್ನು ತುಂಬುವ ಕೆಲಸವನ್ನು ಪುರುಷ ಆಯೋಗ ಮಾಡಬಹುದು," ಎಂದು ಹೇಳಿದರು. ಸಮಿತಿ ಪ್ರಧಾನ ಕಾರ್ಯದರ್ಶಿ ಎಂ. ಮುನಿಕುಮಾರ್ ಅವರು ಮಾತನಾಡಿ,

"ಪುರುಷ ಆಯೋಗ ಮಹಿಳೆಯರ ವಿರುದ್ಧವಲ್ಲ. ಇದು ಸಮಾಜದಲ್ಲಿ ಸಮತೋಲನ ಮತ್ತು ನ್ಯಾಯ ಸ್ಥಾಪನೆಗಾಗಿ. ಎಲ್ಲ ವರ್ಗಗಳ ಸಮಸ್ಯೆಗಳಿಗೆ ಸಮಾನವಾಗಿ ಸ್ಪಂದಿಸುವ ವ್ಯವಸ್ಥೆ ಬೇಕಾಗಿದೆ," ಎಂದು ಅಭಿಪ್ರಾಯಪಟ್ಟರು.

ಈ ಸಂದರ್ಭದಲ್ಲಿ ಸಮಿತಿಯ ಮುಖಂಡರಾದ ವೇಲು, ಮುಖ್ಯ ಪ್ರಧಾನ ಕಾರ್ಯದರ್ಶಿಗಳಾದ ರಂಗನಾಥ್ ಎಲ್. ಪಾತ್ರೋಟಿ ಸದಸ್ಯರಾದ ರುದ್ರೇಶ್, ಆರ್ ಜೆ ಪ್ರಿಯಾಂಕಾ. ಹಾಗೂ ನಾಗರಾಜ್ ಪಾಟೀಲ್, ಉಪಸ್ಥಿತರಿದ್ದರು

ವಿಧಾನ ಪರಿಷತ್ ಸದಸ್ಯರಾದ ಕೆ.ಎ. ತಿಪ್ಪೇಸ್ವಾಮಿ ಅವರು ಮನವಿಯನ್ನು ಆಲಿಸಿ, ವಿಷಯವನ್ನು ಸರ್ಕಾರದ ಗಮನಕ್ಕೆ ತರಲಾಗುವುದು ಹಾಗೂ ಸೂಕ್ತ ವೇದಿಕೆಯಲ್ಲಿ ಚರ್ಚೆ ನಡೆಸುವುದಾಗಿ ಭರವಸೆ ನೀಡಿದರು.

## ಸಕಾಲಕ್ಕೆ ಮದುವೆ ಮಾಡ್ಲಿಲ್ಲ ಅಂತ ತಂದೆಯನ್ನೇ ಕೊಂದ ಮಗ





**ಚಿತ್ರದುರ್ಗ:** ಸಕಾಲಕ್ಕೆ ಮದುವೆ ಮಾಡಲಿ ಲ್ಲವೆಂದು ಆಕ್ರೋ ಶಗೊಂಡ ಪಾಪಿ ಪುತ್ರನೋರ್ವ ಹೆತ್ತ ತಂದೆಯನ್ನೇ ಬರ್ಬರವಾಗಿ ಕೊಲೆಗೈದಿರುವ ಘಟನೆ ಚಿತ್ರದುರ್ಗ ಜಿಲ್ಲೆಯ ಹೊಸದುರ್ಗ ತಾಲೂಕಿನ ಅತ್ತಿಘಟ್ಟ ಗ್ರಾಮದಲ್ಲಿ ನಡೆದಿದೆ. ಗ್ರಾಮದ ಸಣ್ಣನಿಂಗಪ್ಪ ಮೃತ ತಂದೆ. ಈತನ ಚಿಕ್ಕಮಗ ನಿಂಗರಾಜ್ ನನ್ನ ಜೊತೆಗೆ ಬೆಳೆದ ಸ್ನೇಹಿತರೆಲ್ಲರೂ ಮದುವೆಯಾದರು.

ಆದರೆ ನೀನು ನನಗೆ ಸಕಾಲಕ್ಕೆ ಮಾಡಲಿಲ್ಲವೆಂದು ತಂದೆಯೊಂದಿಗೆ ದಿನವೂ ಜಗಳ ಮಾಡುತ್ತಿದ್ದ. ಈ ವಿಚಾರವಾಗಿ ಅಣ್ಣ , ಅಕ್ಕ , ತಾಯಿ, ಕುಟುಂಬಸ್ಥರು ಎಷ್ಟೇ ಬುದ್ಧಿವಾದ ಹೇಳಿದರೂ ಜಗಳ ಮಾತ್ರ ನಿಲ್ಲಿಸಿರಲಿಲ್ಲ. ಇದೇ ವಿಚಾರಕ್ಕೆ ಸಿಟ್ಟಾಗಿದ್ದ ನಿಂಗರಾಜ್ (36) ಬುಧವಾರ ರಾತ್ರಿ ತಂದೆ ಸಣ್ಣನಿಂಗಪ್ಪ (65) ಮಲಗಿದ್ದ ವೇಳೆ ಕಬ್ಬಿಣದ ರಾಡ್‌ನಿಂದ ತಲೆಗೆ ಹೊಡೆದು ಹತ್ಯೆಗೈದಿದ್ದಾನೆ. ಮೃತ ಸಣ್ಣನಿಂಗಪ್ಪನಿಗೆ ಮೂವರು ಮಕ್ಕಳು. ಹಿರಿಯ ಮಗ ಮಾರುತಿ, ಎರಡನೇ ಮಗ ನಿಂಗರಾಜ್, ಕಿರಿಯ ಮಗಳು ಜ್ಯೋತಿ. ಮಾರುತಿ ಹಾಗೂ ಜ್ಯೋತಿಗೆ ಮದುವೆಯಾಗಿತ್ತು. ಆದರೆ ನಿಂಗರಾಜ್‌ಗೆ ಮದುವೆ ಆಗಿರಲಿಲ್ಲ. ಹೀಗಾಗಿ ಬುಧವಾರ ನಿಂಗರಾಜ್ ಮದುವೆ ಮಾಡದ ವಿಚಾರಕ್ಕೆ ತಂದೆ ಸಣ್ಣನಿಂಗಪ್ಪ ಜೊತೆಗೆ ಜಗಳ ಮಾಡಿದ್ದ. ಆಗ ಹೊಸದುರ್ಗದಲ್ಲಿ ಇದ್ದ ಹಿರಿಯ ಮಗ ಮಾರುತಿಯನ್ನು ಮನೆಗೆ ಕರೆದು ಬುದ್ಧಿ ಹೇಳಿಸಿದ್ದರು. ಆದರೆ ಇಷ್ಟಕ್ಕೆ ಸುಮ್ಮನೆ ಆಗದ ನಿಂಗರಾಜ್ 11 ಗಂಟೆಯ ಸುಮಾರಿಗೆ ಮನೆಯಲ್ಲಿ ಮಲಗಿದ್ದಂತಹ ತಂದೆ ಸಣ್ಣನಿಂಗಪ್ಪನಿಗೆ ಟ್ರ್ಯಾಕ್ಟರ್‌ನಲ್ಲಿದ್ದ ರಾಡ್‌ನಿಂದ ತಲೆಗೆ ಹೊಡೆದು ಪರಾರಿ ಆಗಿದ್ದಾನೆ. ಈ ವೇಳೆ ಸಣ್ಣನಿಂಗಪ್ಪನ ಕೂಗಾಟ ಕೇಳಿ ಕುಟುಂಬಸ್ಥರು ಎದ್ದಿದ್ದು , ಹಲ್ಲೆಗೊಳಗಾಗಿ ತೀವ್ರ ರಕ್ತ ಸ್ರಾವಗೊಂಡಿದ್ದಂತಹ ಸಣ್ಣನಿಂಗಪ್ಪನನ್ನು ಹೊಸದುರ್ಗ ತಾಲೂಕು ಆಸ್ಪತ್ರೆಗೆ ಸಾಗಿಸಿದ್ದರು.

ಈ ವೇಳೆ ಪರೀಕ್ಷೆ ನಡೆಸಿದಂತಹ ವೈದ್ಯರು ಸಣ್ಣನಿಂಗಪ್ಪ ಮೃತ ಪಟ್ಟಿರುವುದನ್ನು ಖಚಿತಪಡಿಸಿದ್ದಾರೆ. ಘಟನೆ ಸಂಬಂಧ ಹಿರಿಯ ಮಗ ಮಾರುತಿ, ಹೊಸದುರ್ಗ ಪೊಲೀಸ್ ಠಾಣೆಗೆ ತೆರಳಿ ತಮ್ಮ ನಿಂಗರಾಜ್ ತಂದೆ ಸಣ್ಣನಿಂಗಪ್ಪನನ್ನು ರಾಡ್‌ನಿಂದ ಹೊಡೆದು ಹತ್ಯೆ ಮಾಡಿದ್ದಾಗಿ ದೂರು ನೀಡಿದ್ದಾರೆ.

ಸುದ್ದಿ ಹಾಗೂ ಜಾಹೀರಾತುಗಳಿಗೆ ಸಂಪರ್ಕಿಸಿ :9538786812/8217606793

Printed by: R Ramesh, Published by Abhishek D R On Behalf of Abhishek D R, Printed at Maruthi Enterprises. No.1159, Near Floor Mill, D Cross, Doddaballapura Town, Bengaluru rural, Karnataka - 561203, Published at No. 3769/1, Rajarathna Nivasa, KSRTC Layout, Near Ambedkar Stadium, Rayan Nagara, Nelamangala. Editor Abhishek D R.

# ಕಾಡಿನ ಕ್ರೌರ್ಯಕ್ಕೆ ತೆರೆ: ಹುಲಿಗಳನ್ನು ಕೊಂದು ತುಂಡರಿಸಿದ್ದ ಮರಿ ವೀರಪ್ಪನ್ ಸೆರೆ

**ಚಾಮರಾಜನಗರ:** ಬರೋಬ್ಬರಿ 5 ತಿಂಗಳಿನಿಂದ ಅರಣ್ಯಾಧಿಕಾರಿಗಳ ನಿದ್ದೆಗೆಡಿಸಿದ್ದ ನಟೋರಿಯಸ್ ಗೋವಿಂದ ಅಲಿಯಾಸ್ ಮರಿ ವೀರಪ್ಪನ್ ಇದೀಗ ಕೊನೆಗೂ ಅರಣ್ಯಾಧಿಕಾರಿಗಳ ಕೈಯಲ್ಲಿ ಲಾಕ್ ಆಗಿದ್ದಾನೆ. ಈ ಮರಿ ವೀರಪ್ಪನ್ ಬಂಧನ ಮಲೆ ಮಹದೇಶ್ವರ ವನ್ಯ ಜೀವಿಧಾಮದ ಸಿಬ್ಬಂದಿಗೆ ದೊಡ್ಡ ಸವಾಲಾಗಿತ್ತು. ಇದೀಗ ನಿರಂತರ ಕಾರ್ಯಚರಣೆಯ ನಂತರ ಗೋವಿಂದನ್ನು ಬಂಧಿಸಲಾಗಿದೆ. ಪಚ್ಚೆದೊಡ್ಡಿ ಗ್ರಾಮದ ಬಳಿ ಹುಲಿಯನ್ನು ಕೊಂದು ಮೂರು ಭಾಗಗಳಾಗಿ ತುಂಡರಿಸಿದ ಪ್ರಕರಣಕ್ಕೆ ಸಂಬಂಧಿಸಿದಂತೆ ಈ ನಟೋರಿಯಸ್ ಗೋವಿಂದ ಹುಡುಕಾಟ ನಡೆದಿತ್ತು. ಚಾಮರಾಜನಗರ ಜಿಲ್ಲೆ ಹನೂರು ತಾಲೂಕಿನ ಪಚ್ಚೆದೊಡ್ಡಿ ಕಾಡಂಚಿನ ಗ್ರಾಮದಲ್ಲಿ ಈ ನಟೋರಿಯಸ್ ಗೋವಿಂದ ತಿರುಗಾಡುತ್ತಿದ್ದ ಎಂದು ಹೇಳಲಾಗಿತ್ತು. ಇದೀಗ



ಅರಣ್ಯಾಧಿಕಾರಿಗಳು ಮೈಸೂರಿನ ರೈಲ್ವೆ ನಿಲ್ದಾಣದಲ್ಲಿ ಆರೋಪಿಯನ್ನು ಸೆರೆ ಹಿಡಿದಿದ್ದಾರೆ. ಗೋವಿಂದ ಹುಲಿಗಳಿಗೆ ಕಾರ್ಬೋಫ್ಯೂರಾನ್ ವಿಷ ಹಾಕಿ ಸತ್ತ ಬಳಿಕ ದೇಹವನ್ನು ಮೂರು ತುಂಡಗಳಾಗಿ ಕತ್ತರಿಸುತ್ತಿದ್ದ ಎಂದು ಅಧಿಕಾರಿಗಳು ಹೇಳಿದ್ದಾರೆ.

ಈ ಪ್ರಕರಣ ಅರಣ್ಯಾಧಿಕಾರಿಗಳಿಗೆ ದೊಡ್ಡ ತಲೆನೋವಾಗಿತ್ತು. ಇದೇ ಪ್ರಕರಣಕ್ಕೆ ಸಂಬಂಧಿಸಿದಂತೆ ಈ ಹಿಂದೆ ಪಚ್ಚಮಲ್ಲ, ಸಿದ್ದ, ಸಂಪು, ಚಂದು ಹಾಗೂ ಅಭಿಷೇಕ್ ಎಂಬುವವರನ್ನು ಬಂಧಿಸಲಾಗಿತ್ತು. ಆದರೆ ನ್ಯಾಯಾಂಗ ಬಂಧನದಲ್ಲಿದ್ದ ಆರೋಪಿಗಳಿಗೆ ಇತ್ತೀಚೆಗಷ್ಟೆ ಕೊಳ್ಳೇಗಾಲ ಜೆಎಂಎಫ್ ಸಿ ನ್ಯಾಯಾಲಯದಿಂದ ಜಾಮೀನು ಮಂಜೂರು ಮಾಡಲಾಗಿತ್ತು. ಆದ್ರೆ 5 ತಿಂಗಳಿಂದ ಅರಣ್ಯ ಅಧಿಕಾರಿಗಳ ಕೈಗೆ ಸಿಗದೆ ಆಟವಾಡಿಸುತ್ತಿದ್ದ ಗೋವಿಂದನ ಖಚಿತ ಮಾಹಿತಿ ಸಿಕ್ಕ ತಕ್ಷಣ ಅರಣ್ಯಾಧಿಕಾರಿಗಳು ಅವನನ್ನು ಬಂಧಿಸಿದ್ದಾರೆ. ಬರೋಬ್ಬರಿ 30 ಮಂದಿ ಅರಣ್ಯ ಸಿಬ್ಬಂದಿಗಳು ಬೃಹತ್ ಕಾರ್ಯಾಚರಣೆ ನಡೆಸಿದ್ದಾರೆ ಕಾಡುಗಳ್ಳ ವೀರಪ್ಪನ್ ಸತ್ತು ಹಲವು ವರ್ಷಗಳಾಗಿದ್ದರೂ, ಅವನಷ್ಟೇ ಅರಣ್ಯ ಪ್ರದೇಶದಲ್ಲಿ ಕ್ರೌರ್ಯ ಮೆರೆವ ಈ ಗೋವಿಂದನ್ನು ಮರಿ ವೀರಪ್ಪನ್ ಎಂದು ಕರೆಯಾಲಾಗಿತ್ತು.

ಇತ್ತೀಚೆಗೆ (ನವೆಂಬರ್ 2025 ರಲ್ಲಿ) ಚಾಮರಾಜನಗರ ಜಿಲ್ಲೆಯ ಮಲೆ ಮಹದೇಶ್ವರ ವನ್ಯಧಾಮದಲ್ಲಿ ನಡೆದ ಭೀಕರ ಹುಲಿ ಬೇಟೆ ಪ್ರಕರಣಕ್ಕೆ ಸಂಬಂಧಿಸಿದಂತೆ ಈ ಹೆಸರು ಮತ್ತೆ ಚರ್ಚೆಗೆ ಬಂದಿದೆ. ಮಲೆ ಮಹದೇಶ್ವರ ವನ್ಯಧಾಮದ ಪಚ್ಚೆದೊಡ್ಡಿ ಗಸ್ತಿನಲ್ಲಿ ಚಿರತೆ ಅಥವಾ ಹುಲಿಗಳನ್ನು ಗುರಿಯಾಗಿಸಿ ಇರಿಸಿದ್ದ ವಿಷವನ್ನು ಸೇವಿಸಿ ದೊಡ್ಡ ಹುಲಿಯೊಂದು ಸಾವನ್ನಪ್ಪಿತ್ತು. ಅದನ್ನು ಮೂರು ತುಂಡುಗಳಾಗಿ ಕತ್ತರಿಸಿ ಕಾಡಿನೊಳಗೆ ಬಿಸಾಡಿದ್ದರು.

ಈ ಭೀಕರ ಕೃತ್ಯ ಅರಣ್ಯ ಇಲಾಖೆ ಮತ್ತು ಪೊಲೀಸರನ್ನು ಬೆಚ್ಚಿಬೀಳಿಸಿತ್ತು. ಇದು ಕೇವಲ ಬೇಟೆಯಲ್ಲ, ಅರಣ್ಯ ಅಧಿಕಾರಿಗಳ ಮೇಲಿನ ಆಕ್ರೋಶ ಎಂದು ಹೇಳಲಾಗಿತ್ತು. ಇದೀಗ ಆತನ ಬಂಧನ ಮಾಡಲಾಗಿದೆ.

# ಬಿಜೆಪಿ ಕಾರ್ಯಕರ್ತೆ ಮೇಲೆ ಆದ ದೌರ್ಜನ್ಯ ಎಲ್ಲರು ತಲೆತಗ್ಗಿಸೋ ಘಟನೆ: ಅರಗ ಜ್ಞಾನೇಂದ್ರ

**ಬೆಂಗಳೂರು:** ಹುಬ್ಬಳ್ಳಿಯಲ್ಲಿ ಬಿಜೆಪಿ ಕಾರ್ಯಕರ್ತೆ ಮೇಲೆ ಆದ ದೌರ್ಜನ್ಯ ಎಲ್ಲರೂ ತಲೆತಗ್ಗಿಸೋ ಘಟನೆ ಅಂತ ಮಾಜಿ ಗೃಹ ಸಚಿವ, ಶಾಸಕ ಅರಗ ಜ್ಞಾನೇಂದ್ರ, ಸರ್ಕಾರದ ವಿರುದ್ಧ ವಾಗ್ದಾಳಿ ನಡೆಸಿದ್ದಾರೆ. ವಿಧಾನಸೌಧದಲ್ಲಿ ಪ್ರತಿಕ್ರಿಯೆ ನೀಡಿದ ಅವರು,ಹುಬ್ಬಳ್ಳಿಯಲ್ಲಿ ಬಿಜೆಪಿ ಕಾರ್ಯಕರ್ತೆ ಸುಜಾತ ಅನ್ನೋ ಮಹಿಳೆ ಮೇಲೆ ದೌರ್ಜನ್ಯ ಆಗಿದೆ. ಇದೊಂದು ಅಮಾನುಷವಾದ ಘಟನೆ. ಸುಪ್ರೀಂಕೋರ್ಟ್ ಆದೇಶ ಇದೆ. ಮಹಿಳೆಯ ಬಂಧನಕ್ಕೆ ನಿಯಮ ಇದೆ. ಬಿಜೆಪಿ ಕಾರ್ಯಕರ್ತೆಯನ್ನ ಟೆರರಿಸ್ಟ್, ದರೋಡೆಕೋರರನ್ನ ಬಂಧನ ಮಾಡೋ ರೀತಿ ಮಾಡೋ ರೀತಿ ಬಂಧನ ಆಗಿದೆ.



ಇದು ಸರಿಯಲ್ಲ ಅಂತ ಕಿಡಿಕಾರಿದರು ಕಾಂಗ್ರೆಸ್ ಕಾರ್ಪೋರೇಟರ್ ಸ್ಟೇಷನ್ ಹೋಗಿದ್ದಾರೆ. ಇದೆಲ್ಲವೂ ಅನುಮಾನಕ್ಕೆ ಕಾರಣವಾಗಿದೆ. ಇದೆಲ್ಲವೂ ಸಂಶಯಾಸ್ಪದವಾಗಿದೆ. ಸುಜಾತರನ್ನ ಯಾಕೆ ಪೊಲೀಸರು ಬಂಧನ ಮಾಡಿದ್ರು? ಪೊಲೀಸರು ಕಾಂಗ್ರೆಸ್ ಅವರು ದೂರು ಕೊಟ್ಟ ಕೂಡಲೇ ಬಿಜೆಪಿ ಅವರ ಮೇಲೆ ಕೇಸ್ ಹಾಕೋದು ಸರಿಯಲ್ಲ. ಈ ಸರ್ಕಾರ ಬಂದ ಮೇಲೆ ಇಂತಹ ದೌರ್ಜನ್ಯ ಪ್ರಕರಣಗಳು ಜಾಸ್ತಿ ಆಗುತ್ತಿದೆ. ಬಿಜೆಪಿ ಕಾರ್ಯಕರ್ತರ ಮೇಲೆ ಕ್ರಮ ತೆಗೆದುಕೊಳ್ಳುವ ಕೆಲಸ ಆಗುತ್ತಿದೆ. ಹುಬ್ಬಳ್ಳಿ ಘಟನೆ ಎಲ್ಲರೂ ತಲೆ ತಗ್ಗಿಸೋ ಘಟನೆ ಎಂದು ಹರಿಹಾಯ್ದರು. ಪೊಲೀಸ್ ವರಿಷ್ಠಾಧಿಕಾರಿ ಮೊದಲೇ ಹೇಳಿಕೆ ಕೊಟ್ಟು ಸಿಬ್ಬಂದಿ ರಕ್ಷಣೆ ಮಾಡಿದ್ದಾರೆ. ಹುಬ್ಬಳ್ಳಿ ಪೊಲೀಸ್ ಕಮೀಷನರ್ ತಮ್ಮ ಹೇಳಿಕೆ ವಾಪಸ್ ಪಡೆಯಬೇಕು. ಪೊಲೀಸರ ಕೃತ್ಯದ ಬಗ್ಗೆ ಸೂಕ್ತ ತನಿಖೆ ಆಗಬೇಕು. ತಪ್ಪು ಮಾಡಿರೋರ ಮೇಲೆ ಕ್ರಮ ಆಗಬೇಕು ಎಂದು ಆಗ್ರಹಿಸಿದರು.

# ನ್ಯಾಯಾಲಯಕ್ಕೆ ಬಾಂಬ್ ಬೆದರಿಕೆ



**ಪಾಟ್ನಾ:** ಇಲ್ಲಿನ ಸಿವಿಲ್ ನ್ಯಾಯಾಲಯಕ್ಕೆ ಬಾಂಬ್ ಬೆದರಿಕೆ ಇ-ಮೇಲ್ ಬಂದಿದ್ದು, ಕೆಲಕಾಲ ಆತಂಕದ ಪರಿಸ್ಥಿತಿ ನಿರ್ಮಾಣವಾಗಿತ್ತು. ಇಮೇಲ್‌ನಲ್ಲಿ ನ್ಯಾಯಾಲಯದ ಆವರಣದಲ್ಲಿ ಆರ್‌ಡಿಎಕ್ಸ್ ಆಧಾರಿತ ಸ್ಫೋಟಕಗಳನ್ನು ಇರಿಸಲಾಗಿದೆ ಎಂದು ಉಲ್ಲೇಖಿಸಲಾಗಿತ್ತು ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಬೆದರಿಕೆ ಮೇಲ್ ಸ್ವೀಕರಿಸಿದ ತಕ್ಷಣ ನ್ಯಾಯಾಲಯದಲ್ಲಿ ವಕೀಲರು, ಸಿಬ್ಬಂದಿ, ನ್ಯಾಯಾಧೀಶರು ಮತ್ತು ಕಕ್ಷಿದಾರರನ್ನು ಸುರಕ್ಷಿತವಾಗಿ ಹೊರಗೆ ಕಳುಹಿಸಲಾಯಿತು. ಸ್ಥಳಕ್ಕೆ ಪಿರ್‌ಬಹೋರ್ ಪೊಲೀಸ್ ಠಾಣೆಯ ಸಿಬ್ಬಂದಿ, ಬಾಂಬ್ ಡಿಸ್ಪೋಸಲ್ ಸ್ಕ್ವಾಡ್ ಮತ್ತು ಡಾಕ್ ಸ್ಕ್ವಾಡ್ ತಲುಪಿ ಸಂಪೂರ್ಣ ತಪಾಸಣೆ ನಡೆಸಿದರು. ಆದರೆ ಯಾವುದೇ ಅನುಮಾನಾಸ್ಪದ ವಸ್ತು ಅಥವಾ ಸ್ಫೋಟಕಗಳು ಪತ್ತೆಯಾಗಿಲ್ಲ. ಪೊಲೀಸರು ಇದು ಹುಸಿ ಬಾಂಬ್ ಬೆದರಿಕೆ ಎಂದು ಘೋಷಿಸಿದ್ದಾರೆ. ಇ-ಮೇಲ್ ಕಳುಹಿಸಿದವರನ್ನು ಪತ್ತೆಹಚ್ಚಲು ತನಿಖೆ ಆರಂಭಿಸಲಾಗಿದೆ. ಡಿಜಿಟಲ್ ಟ್ರೇಸ್‌ಗಳನ್ನು ಪರಿಶೀಲಿಸುವುದು ಮತ್ತು ಸಿಸಿಟಿವಿ ದೃಶ್ಯಾವಳಿ ಪರಿಶೀಲನೆ ನಡೆಯುತ್ತಿದೆ.

ಹಿರಿಯ ಪೊಲೀಸ್ ಅಧಿಕಾರಿಗಳು, ಆತಂಕ ಸೃಷ್ಟಿಸುವ ಯತ್ನಗಳ ವಿರುದ್ಧ ಕಠಿಣ ಕ್ರಮ ಕೈಗೊಳ್ಳುವುದಾಗಿ ಭರವಸೆ ನೀಡಿದ್ದಾರೆ. ಕಾಸರಗೋಡಿನ ಜಿಲ್ಲಾ ನ್ಯಾಯಾಲಯಕ್ಕೂ ಬಾಂಬ್ ಬೆದರಿಕೆ ಬಂದಿದ್ದು, ಆವರಣದಲ್ಲಿ ಪರಿಶೀಲನೆ ನಡೆಸಲಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ. ಜಿಲ್ಲಾ ನ್ಯಾಯಾಲಯದ ಅಧಿಕೃತ ಇಮೇಲ್ ಐಡಿಗೆ ಬೆಳಿಗ್ಗೆ 11 ಗಂಟೆ ಸುಮಾರಿಗೆ ಬೆದರಿಕೆ ಮೇಲ್ ಬಂದಿದೆ. "ತಕ್ಷಣ, ತಪಾಸಣೆ ನಡೆಸಲು ಬಾಂಬ್ ನಿಷ್ಕ್ರಿಯ ದಳವನ್ನು ನಿಯೋಜಿಸಲಾಯಿತು ಮತ್ತು ನ್ಯಾಯಾಲಯ ಸಂಕೀರ್ಣವನ್ನು ಸ್ಥಳಾಂತರಿಸಲಾಯಿತು. ಇಲ್ಲಿಯವರೆಗೆ ಏನೂ ಪತ್ತೆಯಾಗಿಲ್ಲ" ಎಂದು ಹಿರಿಯ ಪೊಲೀಸ್ ಅಧಿಕಾರಿಯೊಬ್ಬರು ತಿಳಿಸಿದ್ದಾರೆ.

# ಸದ್ಯದಲ್ಲೇ ಬಿಜೆಪಿಯೊಂದಿಗೆ ಜೆಡಿಎಸ್ ವಿಲೀನ – ಡಿಕೆಶಿ ಹೊಸ ಬಾಂಬ್



**ಬೆಂಗಳೂರು:** ರಾಜಕೀಯದಲ್ಲಿ ಕುಮಾರಸ್ವಾಮಿ ಅವರಿಗಿಂತ ಹೆಚ್ಚಿನ ಅನುಭವ ಇದೆ. ನಾನು ಸಿಎಂ ಆಗದೇ ಇರಬಹುದು. ಆದರೆ ಆಡಳಿತ ವಿಚಾರದಲ್ಲಿ ಅವರಿಗಿಂತ ಅನುಭವ ಹೊಂದಿದ್ದೇನೆ. ಅವರಿಂದ ಕಲಿಯುವ ಅಗತ್ಯ ನನಗಿಲ್ಲ ಎಂದು ಡಿಸಿಎಂ ಡಿಕೆಶಿ ತಿರುಗೇಟು ನೀಡಿದರು. ಕೆಪಿಸಿಸಿ ಕಚೇರಿಯಲ್ಲಿ ಚಾಮರಾಜಪೇಟೆ ವಿಧಾನಸಭಾ ಕ್ಷೇತ್ರದ ಜೆಡಿಎಸ್ ಮುಖಂಡ ಗೋವಿಂದರಾಜ್ ಅವರ ಪಕ್ಷಕ್ಕೆ ಸೇರ್ಪಡೆ ಕಾರ್ಯಕ್ರಮ ನಡೆಯಿತು. ಇದೇ ವೇಳೆ ಮಾಧ್ಯಮಗಳ ಪ್ರಶ್ನೆಗೆ ಉತ್ತರಿಸಿದ ಅವರು, ಬಳ್ಳಾರಿಯಲ್ಲಿ ಪೊಲೀಸ್ ಅಧಿಕಾರಿಗಳ ಜೊತೆ ನಡೆಸಿದ ಸಭೆಗೆ ಕುಮಾರಸ್ವಾಮಿ ಆಕ್ಷೇಪ ವ್ಯಕ್ತಪಡಿಸಿರುವ ಬಗ್ಗೆ ಮಾತನಾಡಿದ್ರು. ನಾನು ಬಹಳ ಕಾಲ ಸಚಿವನಾಗಿ ಕೆಲಸ ಮಾಡಿದ್ದೇನೆ. ಆಡಳಿತ ಹೇಗೆ ಮಾಡಬೇಕು? ಯಾರ ಜೊತೆ ಸಭೆ ಮಾಡಬೇಕು? ಮಾಡಬಾರದು ಎಂಬುದು ನನಗೆ ಚೆನ್ನಾಗಿ ಗೊತ್ತಿದೆ ಎಂದು ಕುಟುಕಿದರು.ಜೆ ಜೆಡಿಎಸ್, ಬಿಜೆಪಿ ಜೊತೆ ವಿಲೀನ ಸಾಧ್ಯತೆ

ಕುಮಾರಸ್ವಾಮಿ ಅವರ ಧೋರಣೆ ನೋಡುತ್ತಿದ್ದರೆ, ಸದ್ಯದಲ್ಲೇ ಜೆಡಿಎಸ್ ಪಕ್ಷ ಬಿಜೆಪಿ (BJP) ಜೊತೆ ವಿಲೀನವಾಗುವ ಸಾಧ್ಯತೆ ಇದೆ. ವಿಲೀನವಾದರೆ ನಮಗೂ ಒಳ್ಳೆಯದೇ. ನಾವೂ ನೇರವಾಗಿ ಬಿಜೆಪಿ ಜೊತೆ ಹೋರಾಟ ಮಾಡಬಹುದು. ಆಗ ಆಟಕ್ಕೆ ಮೂರು ಪಕ್ಷ, ಲೆಕ್ಕಕ್ಕೆ ಮಾತ್ರ 2 ಪಕ್ಷ ಎಂಬ ಗೊಂದಲ ಇರುವುದಿಲ್ಲ ಎಂದು ವ್ಯಂಗ್ಯವಾಡಿದರು.

ಇಂದು ಕಾಂಗ್ರೆಸ್ ಪಕ್ಷ ಸೇರ್ಪಡೆಯಾಗಿರುವ ಚಾಮರಾಜಪೇಟೆ ವಿಧಾನಸಭಾ ಕ್ಷೇತ್ರದ ಜೆಡಿಎಸ್ ಮಾಜಿ ಕಾರ್ಪೊರೇಟರ್ ಗೋವಿಂದರಾಜ್ ಹಾಗೂ ಅವರ ಧರ್ಮಪತ್ನಿ ಗೌರಮ್ಮ , ಚಂದ್ರಶೇಖರ್, ಜೆಡಿಎಸ್ ಅಧ್ಯಕ್ಷರಾಗಿದ್ದ ಡೇವಿಡ್ ಸೇರಿದಂತೆ ನೂರಾರು ಮುಖಂಡರನ್ನ ಸ್ವಾಗತಿಸುತ್ತೇನೆ. ಗೋವಿಂದರಾಜು ಅವರು ಕುಟುಂಬ ಸ್ನೇಹಿತರು, ನನಗೆ ಮೊದಲಿನಿಂದಲೂ ಪರಿಚಯಸ್ಥರು. ಅವರು ಜೆಡಿಎಸ್ ಪಕ್ಷ ಸಂಘಟಿಸಿ ಅಭ್ಯರ್ಥಿಯೂ ಆಗಿದ್ದರು. ಆದರೆ ಈಗ ಬಿಜೆಪಿ ಹಾಗೂ ಜೆಡಿಎಸ್ ಮಾಡಿಕೊಂಡಿರುವ ಹೊಂದಾಣಿಕೆ ಒಪ್ಪಿಕೊಳ್ಳಲು ಸಾಧ್ಯವಾಗದೇ ಇಂದು ಕಾಂಗ್ರೆಸ್ ಪಕ್ಷ ಸೇರುತ್ತಿದ್ದಾರೆ ಎಂದರು. ಡಿಎಸ್, ಬಿಜೆಪಿ ಜೊತೆ ವಿಲೀನ ಸಾಧ್ಯತೆ ಕುಮಾರಸ್ವಾಮಿ ಅವರ ಧೋರಣೆ ನೋಡುತ್ತಿದ್ದರೆ, ಸದ್ಯದಲ್ಲೇ ಜೆಡಿಎಸ್ ಪಕ್ಷ ಬಿಜೆಪಿ (BJP) ಜೊತೆ ವಿಲೀನವಾಗುವ ಸಾಧ್ಯತೆ ಇದೆ. ವಿಲೀನವಾದರೆ ನಮಗೂ ಒಳ್ಳೆಯದೇ. ನಾವೂ ನೇರವಾಗಿ ಬಿಜೆಪಿ ಜೊತೆ ಹೋರಾಟ ಮಾಡಬಹುದು. ಆಗ ಆಟಕ್ಕೆ ಮೂರು ಪಕ್ಷ, ಲೆಕ್ಕಕ್ಕೆ ಮಾತ್ರ 2 ಪಕ್ಷ ಎಂಬ ಗೊಂದಲ ಇರುವುದಿಲ್ಲ ಎಂದು ವ್ಯಂಗ್ಯವಾಡಿದರು. ಇಂದು ಕಾಂಗ್ರೆಸ್ ಪಕ್ಷ ಸೇರ್ಪಡೆಯಾಗಿರುವ ಚಾಮರಾಜಪೇಟೆ ವಿಧಾನಸಭಾ ಕ್ಷೇತ್ರದ ಜೆಡಿಎಸ್ ಮಾಜಿ ಕಾರ್ಪೊರೇಟರ್ ಗೋವಿಂದರಾಜ್ ಹಾಗೂ ಅವರ ಧರ್ಮಪತ್ನಿ ಗೌರಮ್ಮ , ಚಂದ್ರಶೇಖರ್, ಜೆಡಿಎಸ್ ಅಧ್ಯಕ್ಷರಾಗಿದ್ದ ಡೇವಿಡ್ ಸೇರಿದಂತೆ ನೂರಾರು ಮುಖಂಡರನ್ನ ಸ್ವಾಗತಿಸುತ್ತೇನೆ. ಗೋವಿಂದರಾಜು ಅವರು ಕುಟುಂಬ ಸ್ನೇಹಿತರು, ನನಗೆ ಮೊದಲಿನಿಂದಲೂ ಪರಿಚಯಸ್ಥರು. ಅವರು ಜೆಡಿಎಸ್ ಪಕ್ಷ ಸಂಘಟಿಸಿ ಅಭ್ಯರ್ಥಿಯೂ ಆಗಿದ್ದರು. ಆದರೆ ಈಗ ಬಿಜೆಪಿ ಹಾಗೂ ಜೆಡಿಎಸ್ ಮಾಡಿಕೊಂಡಿರುವ ಹೊಂದಾಣಿಕೆ ಒಪ್ಪಿಕೊಳ್ಳಲು ಸಾಧ್ಯವಾಗದೇ ಇಂದು ಕಾಂಗ್ರೆಸ್ ಪಕ್ಷ ಸೇರುತ್ತಿದ್ದಾರೆ ಎಂದರು. ನಮ್ಮದು ಜಾತ್ಯಾತೀತ ಸಿದ್ಧಾಂತ. ಹೀಗಾಗಿ ಜಮೀರ್ ಅಹ್ಮದ್ ಖಾನ್ ಅವರ ಮುಖಂಡತ್ವದಲ್ಲಿ ಕಾಂಗ್ರೆಸ್ ಪಕ್ಷದ ಜೊತೆ ಗುರುತಿಸಿಕೊಳ್ಳಲು ಅವರು ಈ ತೀರ್ಮಾನಕ್ಕೆ ಬಂದಿದ್ದಾರೆ. ಬಿಜೆಪಿ, ಜೆಡಿಎಸ್ ಬೇಗ ವಿಲೀನವಾದಷ್ಟೂ ನಮಗೇ ಒಳ್ಳೆಯದು. ಅವರು ಬೇಗ ತೀರ್ಮಾನ ಮಾಡಿದರೆ ನಾವು ನಮ್ಮ ತೀರ್ಮಾನ ಮಾಡಿಕೊಳ್ಳಬಹುದು. ಈಗ ಅಡ್ಡಗೋಡೆ ಮೇಲೆ ದೀಪ ಇಟ್ಟಂತೆ ಆಡುತ್ತಿದ್ದಾರೆ ಎಂದು ಬಿಜೆಪಿ ಹಾಗೂ ಜೆಡಿಎಸ್ ಪಕ್ಷದ ನಾಯಕರೇ ಹೇಳುತ್ತಿದ್ದಾರೆ ಎಂದರು. ಅನೇಕ ಕ್ಷೇತ್ರಗಳಲ್ಲಿ ಬಹಳ ಗೊಂದಲಗಳಿವೆ. ನಮ್ಮ ಭವಿಷ್ಯ ಏನು ಎಂಬ ಪ್ರಶ್ನೆಯಲ್ಲಿದ್ದಾರೆ. ಬೆಂಗಳೂರು ನಗರದಲ್ಲಿ ಚುನಾವಣೆ ಸಮೀಪಿಸುತ್ತಿದೆ. ಈ ಚುನಾವಣೆಯಲ್ಲಿ ಕಾಂಗ್ರೆಸ್ ಪಕ್ಷದಿಂದ ಸ್ಪರ್ಧಿಸಲು ಅನೇಕರು ಉತ್ಸುಕರಾಗಿದ್ದಾರೆ. ಬೆಂಗಳೂರು ಪಶ್ಚಿಮ ಪಾಲಿಕೆಯಲ್ಲಿ 247, ಬೆಂಗಳೂರು ಉತ್ತರದಲ್ಲಿ 199, ಬೆಂಗಳೂರು ದಕ್ಷಿಣದಲ್ಲಿ 129, ಬೆಂಗಳೂರು ಕೇಂದ್ರದಲ್ಲಿ 106, ಬೆಂಗಳೂರು ಪೂರ್ವದಲ್ಲಿ 78 ಅರ್ಜಿಗಳನ್ನ ತೆಗೆದುಕೊಳ್ಳಲಾಗಿದೆ. ಒಟ್ಟು 779 ಟಿಕೆಟ್ ಆಕಾಂಕ್ಷಿಗಳು ನಮ್ಮ ಅರ್ಜಿ ಸ್ವೀಕರಿಸಿದ್ದಾರೆ. ಅರ್ಜಿ ತೆಗೆದುಕೊಂಡವರು ಕೊನೇ ದಿನದವರೆಗೂ ಕಾಯಬೇಡಿ. 2-3 ದಿನಗಳಲ್ಲೇ ಸಲ್ಲಿಕೆ ಮಾಡಿ. ನಾವು ಕೂಡ ಪಕ್ಷದ ಅಭ್ಯರ್ಥಿ ಆಯ್ಕೆಗೆ ವಿಮರ್ಷೆ ಮಾಡಬೇಕಿದೆ. ಕೊನೇ ಘಳಿಗೆಯಲ್ಲಿ ಸಲ್ಲಿಕೆಯಾದರೆ ವಿಮರ್ಷೆ ಮಾಡುವುದು ಕಷ್ಟವಾಗುತ್ತದೆ. ಜ.10 ರ ಒಳಗಾಗಿ ಅರ್ಜಿ ಕೊಟ್ಟರೆ ನಾವು ನಮ್ಮ ತಂಡವನ್ನು ಕಳುಹಿಸಿ ವರದಿ ಪಡೆಯಬಹುದು. ಯಾರು ವಾರ್ಡ್ ಗಳಲ್ಲಿ ಕೆಲಸ ಮಾಡಿದ್ದಾರೆ, ಯಾರು ಮಾಡಿಲ್ಲ, ಯಾರು ಪಕ್ಷಕ್ಕೆ ನಿಷ್ಠರಾಗಿದ್ದಾರೆ ಎಂದು ಪರಿಶೀಲನೆ ಮಾಡಬಹುದು" ಎಂದು ತಿಳಿಸಿದರು.

ಸರ್ಕಾರದ ಕೆಲಸಕ್ಕೆ ಬಿಜೆಪಿ ನಾಯಕರಿಂದಲೇ ಸ್ವಾಗತ

ಬೆಂಗಳೂರು ನಗರದಲ್ಲಿ ನಮ್ಮ ಸರ್ಕಾರ ಮಾಡುತ್ತಿರುವ ಕೆಲಸವನ್ನು ಬಿಜೆಪಿ ನಾಯಕರೇ ಸ್ವಾಗತಿಸುತ್ತಿದ್ದಾರೆ. ಕುಡಿಯುವ ನೀರಿನ ಸಮಸ್ಯೆ ಬಗೆಹರಿಸಲಾಗಿದೆ, ರಸ್ತೆಗಳನ್ನು ನಿರ್ಮಿಸಲಾಗುತ್ತಿದೆ. ಖಾತಾ ಪರಿವರ್ತನೆ, ಆಸ್ತಿ ದಾಖಲೆಗಳನ್ನು ಸರಿಪಡಿಸುತ್ತಿರುವುದನ್ನು ನೋಡಿದರೆ, ನಮಗೆ ಭವಿಷ್ಯವಿಲ್ಲ ಎಂದು ಬಿಜೆಪಿ ನಾಯಕರೇ ನಮ್ಮ ಬಳಿ ಹೇಳಿಕೊಂಡಿದ್ದಾರೆ. ಹೀಗಾಗಿ ತಮ್ಮ ಅಸ್ತಿತ್ವ ಉಳಿಸಿಕೊಳ್ಳಲು ಮೊನ್ನೆ ದಳದವರು ನಾವು ಫ್ರೆಂಡ್ಲಿ ಫೈಟ್ ಮಾಡುತ್ತೇವೆ ಎಂದು ಹೇಳಿಕೆ ನೀಡಿದ್ದಾರೆ. ದಯವಿಟ್ಟು ಫ್ರೆಂಡ್ಲಿ ಫೈಟ್ ಬೇಡ, ನೇರವಾಗಿ ಹೋರಾಟ ಮಾಡಿ. ನೀವು ಒಟ್ಟಾಗಿ ಸೀಟು ಹಂಚಿಕೊಂಡು ಹೋರಾಟ ಮಾಡಿ. ನಿಮ್ಮ ಫ್ರೆಂಡ್ಲಿ ಫೈಟ್ ನಿಂದ ನಿಮ್ಮ ಕಾರ್ಯಕರ್ತರಿಗೆ ಗೊಂದಲವಾಗುತ್ತದೆ. ನೇರವಾಗಿ ಹೋರಾಟ ಮಾಡಲು ನಾವು ಸಿದ್ಧವಿದ್ದೇವೆ ಎಂದು ಸವಾಲು ಹಾಕಿದರು.

ಬೆಂಗಳೂರಿನ ಆಡಳಿತ ಸರಿಪಡಿಸಲು 5 ಪಾಲಿಕೆಯಾಗಿ ವಿಂಗಡಿಸಿರುವ ನಮ್ಮ ತೀರ್ಮಾನವನ್ನು ಇಡೀ ದೇಶ ನೋಡುತ್ತಿದೆ. ಚಾಮರಾಜಪೇಟೆ, ಬಹಳ ಇತಿಹಾಸವಿರುವ ಕ್ಷೇತ್ರ. ನಾವು ಎಲ್ಲರನ್ನು ಸಮಾನವಾಗಿ ತೆಗೆದುಕೊಂಡು ಹೋಗುವ ಕೆಲಸ ಮಾಡುತ್ತಿದ್ದೇವೆ. ಇನ್ನು ಅನೇಕ ಕ್ಷೇತ್ರಗಳಲ್ಲಿ ಪಕ್ಷ ಸೇರ್ಪಡೆಯಾಗಲು ಬಯಸಿರುವವರು ನಮ್ಮ ಸಂಪರ್ಕದಲ್ಲಿ ಇದ್ದಾರೆ. ಆದಷ್ಟು ಬೇಗ ಪಾಲಿಕೆ ಚುನಾವಣೆ ಒಳಗೆ ಸೇರ್ಪಡೆ ಮಾಡಿಕೊಳ್ಳಲಾಗುವುದು. ತಡವಾಗಿ ಬಂದರೆ ತೀರ್ಮಾನ ಮಾಡುವುದು ಕಷ್ಟವಾಗುತ್ತದೆ. ಹೀಗಾಗಿ ಆದಷ್ಟು ಬೇಗ ತೀರ್ಮಾನ ಮಾಡಿ ಎಂದರು.

# ಇಡಿ ರೇಡ್ ಬೆನ್ನಲ್ಲೇ ಬಿರುಗಾಳಿ: I-PAC ಆಫೀಸ್‌ನಲ್ಲಿ ದೀದಿಯ ಹಸ್ತಕ್ಷೇಪ

**ಕೋಲ್ಕತ್ತಾ:** ವಿಧಾನಸಭಾ ಚುನಾವಣೆಯ ದಿನಗಳು ಹತ್ತಿರವಾಗುತ್ತಿದ್ದಂತೆ ಪಶ್ಚಿಮ ಬಂಗಾಳದಲ್ಲಿ ಮಹತ್ವದ ಬೆಳವಣಿಗೆಗಳು ನಡೆಯುತ್ತಿವೆ. ಜಾರಿ ನಿರ್ದೇಶನಾಲಯವು ಇಂದು ಕೋಲ್ಕತ್ತಾದ ಹಲವು ಕಡೆಗಳಲ್ಲಿ ದಾಳಿ ನಡೆಸಿದೆ. ಜಾರಿ ನಿರ್ದೇಶನಾಲಯವು ಕೋಲ್ಕತ್ತಾದ ರಾಜಕೀಯ ಸಲಹಾ ಸಂಸ್ಥೆ ಐ-ಪಿಎಸಿ ಕಚೇರಿ ಮತ್ತು ಅದರ ಹಿರಿಯ ಅಧಿಕಾರಿ ಪ್ರತೀಕ್ ಜೈನ್ ನಿವಾಸ ಸೇರಿದಂತೆ ಹಲವು ಸ್ಥಳಗಳಲ್ಲಿ ದಾಳಿ ನಡೆಸಿದೆ. ನಗರದಾದ್ಯಂತ ಕನಿಷ್ಠ 5 ಸ್ಥಳಗಳಲ್ಲಿ ಇಡಿ ತಂಡ ದಾಳಿ ನಡೆಸಿದೆ.

ಆದ್ರೆ ಈವರೆಗೆ ಯಾವುದೇ ಮಾಹಿತಿಯನ್ನ ಬಹಿರಂಗಪಡಿಸಿಲ್ಲ. ವಿಷಯ ತಿಳಿಯುತ್ತಿದ್ದಂತೆ ಐ-ಪಿಎಸಿ ಕಚೇರಿಗೆ ಬಂದ ಸಿಎಂ ಮಮತಾ ಬ್ಯಾನರ್ಜಿ ಪ್ರಮುಖ ಮಾಹಿಯುಳ್ಳ ಫೈಲ್‌ವೊಂದನ್ನ ಹೊತ್ತೊಯ್ದಿದ್ದಾರೆ. ಹಸಿರು ಬಣ್ಣದ ಕಡತ ಹಿಡಿದು ಹೋಗುತ್ತಿರುವ ಫೋಟೋ & ವಿಡಿಯೋ ಕ್ಯಾಮೆರಾದಲ್ಲೂ ಸೆರೆಯಾಗಿದೆ. ಇದಕ್ಕೂ ಮುನ್ನ ಇಡಿ ದಾಳಿಯನ್ನುದ್ದೇಶಿಸಿ ಮಾತನಾಡಿದ ದೀದಿ, ಇದು ಉದ್ದೇಶಪೂರ್ವಕ ಮತ್ತು ರಾಜಕೀಯ ಪ್ರೇರಿತ ದಾಳಿ. ಜೊತೆಗೆ ಬಿಜೆಪಿಯು ಅನೈತಿಕ ವಿಧಾನಗಳ ಮೂಲಕ ಬಂಗಾಳವನ್ನ ವಶಪಡಿಸಿಕೊಳ್ಳಲು ಮಾಡುತ್ತಿರುವ ಪ್ರಯತ್ನದ ಭಾಗವಾಗಿದೆ. ಪ್ರಜಾಸತ್ತಾತ್ಮಕವಾಗಿ ಹೋರಾಡಲು ಸಾಧ್ಯವಾಗದ ಬಿಜೆಪಿ ಈಗ ಇ.ಡಿ. ಯನ್ನ ಅಸ್ತ್ರವಾಗಿ ಬಳಸಿಕೊಂಡು, ಪಕ್ಷದ ದಾಖಲೆಗಳು, ಕಾರ್ಯತಂತ್ರಗಳು, ಅಭ್ಯರ್ಥಿಗೆ ಸಂಬಂಧಿಸಿದ ವಿವರಗಳು ಮತ್ತು ನಿರ್ಣಾಯಕ ದಾಖಲೆಗಳನ್ನ ಬಲವಂತವಾಗಿ ವಶಪಡಿಸಿಕೊಳ್ಳಲು ಪ್ರಯತ್ನಿಸುತ್ತಿದೆ ಎಂದು ಆಕ್ರೋಶ ಹೊರಹಾಕಿದ್ರು.

ಈ ದಾಳಿಯು ಸರ್ವಾಧಿಕಾರಿ ಗೃಹ ಸಚಿವರ ನಿರ್ದೇಶನದ ಅಡಿಯಲ್ಲಿ ಇಡಿಯ ಮೂಲಕ ಆಯೋಜಿಸಲಾದ ದೊಡ್ಡ ಪಿತೂರಿ. ಈ ಪಿತೂರಿಯನ್ನ ಪ್ರತಿ ಹಂತದಲ್ಲೂ ವಿರೋಧಿಸಲಾಗುವುದು. ನಾನು ಬಿಜೆಪಿ ಕಚೇರಿ ಮೇಲೆ ದಾಳಿ ಮಾಡಿದ್ರೆ ಅದ್ರ ಫಲಿತಾಂಶ ಏನಾಗುತ್ತದೆ? ಒಂದ್ಕಡೆ ಸರ್ ಅಭಿಯಾನ ನಡೆಸುವ ಮೂಲಕ ಎಲ್ಲಾ ಮತದಾರರ ಹೆಸರುಗಳನ್ನ ಅಳಿಸುತ್ತಿದ್ದಾರೆ. ಚುನಾವಣೆ ಸಮೀಪ ಇರೋದ್ರಿಂದ ಅವರು ಎಲ್ಲಾ ಮಾಹಿತಿಗಳನ್ನ ಸಂಗ್ರಹ ಮಾಡ್ತಿದ್ದಾರೆ ಎಂದು ಕಿಡಿ ಕಾರಿದ್ದಾರೆ.

# ಸಿದ್ದರಾಮಯ್ಯ ಅವ್ರು ದೇವರಾಜ ಅರಸು ಆಗಲು ಸಾಧ್ಯವಿಲ್ಲ: ಪ್ರತಾಪ್ ಸಿಂಹ





**ಮಡಿಕೇರಿ:** ಸಿಎಂ ಸಿದ್ದರಾಮಯ್ಯ ಅವರು ದೇವರಾಜ ಅರಸು ಆಗಲು ಸಾಧ್ಯವಿಲ್ಲ. ದೇವರಾಜ ಅರಸು ಅವರ ಹತ್ತಿರ ಬರಲು ಕೂಡ ಆಗೋದಿಲ್ಲ ಎಂದು ಮಾಜಿ ಸಂಸದ ಪ್ರತಾಪ್ ಸಿಂಹ ವಾಗ್ದಾಳಿ ನಡೆಸಿದ್ದಾರೆ. ಮಡಿಕೇರಿಯಲ್ಲಿ ಮಾತಾನಾಡಿದ ಅವರು, ದೇವರಾಜು ಅರಸು ಅವರು ನಮ್ಮನ್ನು ಅಗಲಿ ನಾಲ್ಕು ದಶಕಗಳು ಕಳೆದು ಹೋಗಿವೆ. ಅವರು ಮರೆಯಾಗಿ ನಾಲ್ಕು ದಶಕ ಕಳೆದರೂ ಇಂದಿಗೂ ಜನರು ಅವರನ್ನು ದೇವರು ಎಂದು ಪೂಜ್ಯ ಭಾವನೆಯಿಂದ ನೋಡುತ್ತಾರೆ.

ಅಂದರೆ ಅವರ ವ್ಯಕ್ತಿತ್ವ ಹೇಗೆ ಇರಬಹುದು ಊಹಿಸಿಕೊಳ್ಳಿ. ಸುಮ್ಮನೆ ಇದ್ರೂ ವಯಸ್ಸು ಆಗುತ್ತದೆ. ಸಿದ್ದರಾಮಯ್ಯ ಅವರು ಸಿಎಂ ಕುರ್ಚಿಯಲ್ಲಿ ಕುಳಿತು ಕಾಲ ತಳ್ಳುತ್ತಿದ್ದಾರೆ ಅಷ್ಟೆ. ಹೊಸ ದಾಖಲೆ ಬರೆದಿದ್ದಾರೆ ಎಂದು ಹೇಳುತ್ತಾರೆ. ಆದರೆ, ಸಿದ್ದರಾಮಯ್ಯ ಅವರು ದೇವರಾಜ ಅರಸು ಆಗಲೂ ಸಾಧ್ಯವಿಲ್ಲ ಎಂದರು. ದೇವರಾಜ ಅರಸು ಅವರು ಈ ರಾಜ್ಯದ ಜನರಿಗೆ ಅನೇಕ ಕೊಡುಗೆಗಳನ್ನು ಕೊಟ್ಟಿದ್ದಾರೆ. ಸಣ್ಣ ಸಣ್ಣ ಸಮುದಾಯದವರನ್ನು ಕರೆದುಕೊಂಡು ಬಂದು ಕೈ ಹಿಡಿದು ಬೆಳೆಸಿದ್ದಾರೆ. ಕೃಷಿ ಭೂಮಿಯಲ್ಲಿ ಕೆಲಸ ಮಾಡಿಕೊಂಡು ಇರುತ್ತಿದ್ದ ರೈತಾಪಿ ವರ್ಗದ ಜನರಿಗೆ ಉಳುವವನೇ ಭೂಮಿಯ ಒಡೆಯ ಎಂದು ಯೋಜನೆ ತಂದ್ರು. ಬೆಂಗಳೂರು ಅಭಿವೃದ್ಧಿ ಮಾಡಿದ್ರು. ದೇವರಾಜ ಅರಸು ಅವರು ಸಾಮಾನ್ಯ ಹೋಲಿಕೆಗಳಿಗೆ ಮೀರಿದಂತಹ ವ್ಯಕ್ತಿ. ಸಿದ್ದರಾಮಯ್ಯ ಅವರಿಗೆಲ್ಲ ಹೋಲಿಸಿಕೊಳ್ಳಬೇಡಿ. ಸಿದ್ದರಾಮಯ್ಯ ಅವರು ಸಿಎಂ ಆಗಿ ಕರ್ನಾಟಕ ಇತಿಹಾಸದಲ್ಲಿ ಅತೀ ಹೆಚ್ಚು ಸಾಲ ಮಾಡಿದವರು. ಎರಡನೇ ಬಾರಿ ಸಿಎಂ ಆಗಿರುವಾಗ ಹೆಚ್ಚು ಸಾಲ ಮಾಡಿದವರು ನೀವು. ಇದ ನಿಮ್ಮ ಕೊಡುಗೆ ಎಂದು ಪ್ರಶ್ನಿಸಿದರು. ಅನ್ನಭಾಗ್ಯ ನಮ್ಮದು ಎಂದು ಹೇಳುತ್ತೀರಿ. ಆದರೆ, ಅದು ಕೇಂದ್ರ ಸರ್ಕಾರದ ಯೋಜನೆ. ಅನ್ನಭಾಗ್ಯ ನಿಮ್ಮದಲ್ಲ. ಈ ರಾಜ್ಯದ ಜನತೆಗೆ ಎಲ್ಲಾ ದಿವಾಳಿಯ ಭಾಗ್ಯವನ್ನು ನೀಡದ ಕೊಡುಗೆ ನಿಮ್ಮದಾಗಿದೆ. ದೇವರಾಜ ಅರಸು ಅವರ ಹತ್ತಿರಕ್ಕೆ ಬರಲು ಸಹ ಸಿದ್ದರಾಮಯ್ಯ ಅವರಿಗೆ ಸಾಧ್ಯವಿಲ್ಲ. ಸಿದ್ದರಾಮಯ್ಯ ಅವರು ಅಲ್ಪಸಂಖ್ಯಾತರನ್ನು ಓಲೈಕೆ ಮಾಡುವುದರಲ್ಲೇ ಕಾಲ ಕಳೆಯುತ್ತಿದ್ದಾರೆ. ರಾಜ್ಯದ ಅಭಿವೃದ್ಧಿ ಬಗ್ಗೆ ಚಿಂತನೆ ನಡೆಸುತ್ತಿಲ್ಲ ಎಂದು ವಾಗ್ದಾಳಿ ನಡೆಸಿದರು.

# ಅಣ್ಣ ತಂಗಿಯ ಅಕ್ರಮ ಸಂಬಂಧ ತಂಗಿ ಸಾವಿನಲ್ಲಿ ಅಂತ್ಯ

**ಚಿಕ್ಕಬಳ್ಳಾಪುರ:** ಅವರಿಬ್ಬರು ಪರಸ್ಪರ ಚಿಕ್ಕಪ್ಪ ದೊಡ್ಡಪ್ಪನ ಮಕ್ಕಳು. ಅವನಿಗೆ 30 ವರ್ಷ, ಅವಳಿಗೆ 21 ವರ್ಷ ವಯಸ್ಸು. ಆದ್ರೂ ಅವರಿಬ್ಬರು ಅಣ್ಣ ತಂಗಿ ಪವಿತ್ರ ಸಂಬಂಧಕ್ಕೆ ವಿರುದ್ಧವಾಗಿ, ಪರಸ್ಪರ ಪ್ರೀತಿಸಿ ಅಕ್ರಮ ಸಂಬಂಧದಲ್ಲಿ ತೇಲಾಡಿದ್ರು. ಇದನ್ನ ಕಂಡ, ಬಂಧು ಬಳಗ, ಗ್ರಾಮಸ್ಥರು ಬೈಯ್ದು ಬುದ್ದಿ ಹೇಳಿದರೂ ಕೇಳದೆ ಲಿವ್ ಇನ್ ರಿಲೇಷನ್ ಶಿಪ್‌ನಲ್ಲಿ ಇದ್ರಂತೆ, ಆದ್ರೆ ಈಗ ಆಕೆ ಶವವಾಗಿ ಪತ್ತೆಯಾಗಿರುವ ಘಟನೆ ಚಿಕ್ಕಬಳ್ಳಾಪುರ ತಾಲೂಕಿನ ಪೇರೇಸಂದ್ರ ಗ್ರಾಮದಲ್ಲಿ ನಡೆದಿದೆ.





ಆಕೆ ಹೆಸರು ರಾಮಲಕ್ಷ್ಮಿ (21), ಪ್ರತಿಷ್ಠಿತ ಖಾಸಗಿ ಕಂಪನಿಯಲ್ಲಿ ಕೆಲಸ ಮಾಡಿಕೊಂಡಿದ್ದಳು. ತಂದೆ ಹೆಸರು ಆಂಜನಪ್ಪ, ಚಿಕ್ಕಬಳ್ಳಾಪುರ ಜಿಲ್ಲೆ ಬಾಗೇಪಲ್ಲಿ ತಾಲೂಕಿನ ರಾಮಕೃಷ್ಣಪುರದ ನಿವಾಸಿ. ಯುವಕನ ಹೆಸರು ಕೃಷ್ಣ (30), ತಂದೆ ಹೆಸರು ರವಣಪ್ಪ. ಇಬ್ಬರದ್ದೂ ಒಂದೇ ಊರು, ಒಂದೇ ಮನೆ. ರಾಮಲಕ್ಷ್ಮಿ ತಂದೆ ಆಂಜನಪ್ಪ ಹಾಗೂ ಕೃಷ್ಣ ತಂದೆ ರವಣಪ್ಪ ಇಬ್ಬರು ಒಂದೆ ತಾಯಿ ಮಕ್ಕಳು, ಅಣ್ಣ-ತಮ್ಮ ಮಕ್ಕಳೆ. ರಾಮಲಕ್ಷ್ಮಿ ಹಾಗೂ ಕೃಷ್ಣ , ಪಕ್ಕಾ ಅಣ್ಣ ತಂಗಿ ಸಂಬಂಧ, ಇಬ್ಬರು ಚಿಕ್ಕಬಳ್ಳಾಪುರ ತಾಲೂಕಿನ ಪೇರೇಸಂದ್ರ ಗ್ರಾಮದಲ್ಲಿ ಗಂಡ ಹೆಂಡತಿ ಅಂತ ಹೇಳಿಕೊಂಡು ಬಾಡಿಗೆ ಮನೆ ಮಾಡಿಕೊಂಡು ವಾಸವಿದ್ರು. ಆದ್ರೆ ಇಂದು ರಾಮಲಕ್ಷ್ಮಿ ಮನೆನಲ್ಲಿ ನೇಣು ಬಿಗಿದುಕೊಂಡು ಆತ್ಮಹತ್ಯೆ ಮಾಡಿಕೊಂಡ ರೀತಿಯಲ್ಲಿ ಶವ ಪತ್ತೆಯಾಗಿದೆ. ರಾಮಲಕ್ಷ್ಮಿ ಹಾಗೂ ಕೃಷ್ಣ , ಕಳೆದ 3 ವರ್ಷಗಳಿಂದ ಅಣ್ಣ-ತಂಗಿ ಸಂಬಂಧಕ್ಕೆ ವಿರುದ್ಧವಾಗಿ, ಪ್ರೀತಿ ಪ್ರೇಮ ಕಾಮ ಅನೈತಿಕ ಸಂಬಂಧದಲ್ಲಿ ತೊಡಗಿದ್ರಂತೆ, ಇದ್ರಿಂದ ಎರಡು ಕುಟುಂಬಗಳ ಬಂಧು ಬಳಗ, ಇಬ್ಬರಿಗೂ ಬೈಯ್ದು ಬುದ್ಧಿವಾದ ಹೇಳಿದ್ರು. ಕೊನೆಗೆ ರಾಮಕೃಷ್ಣಪುರದಲ್ಲಿ ಒಂದು ಕುಟುಂಬ. ಜಿಲ್ಲೆಯ ಬಾಗೇಪಲ್ಲಿ ಪಟ್ಟಣದಲ್ಲಿ ಒಂದು ಕುಟುಂಬವಾಗಿ ಪ್ರತ್ಯೇಕವಾಗಿ ನೆಲೆಸಿದ್ರು.

ಮತ್ತೊಂದೆಡೆ ಕೃಷ್ಣನಿಗೆ ಬೇರೆ ಹುಡುಗಿಯೊಬ್ಬಳ ಜೊತೆ ಮದುವೆ ಮಾಡಿದ್ರು, ಆದ್ರೂ ಕೃಷ್ಣ ತನ್ನ ತಂಗಿ ರಾಮಲಕ್ಷ್ಮಿಯನ್ನ ಬಿಡದೇ ವಳ ತಲೆ ಕೆಡಿಸಿ ಪ್ರತ್ಯೇಕ ಮನೆ ಮಾಡಿ ಕಳ್ಳ ಸಂಸಾರ ಮಾಡ್ತಿದ್ದಂತೆ, ಈಗ ನೋಡಿದ್ರೆ. ರಾಮಲಕ್ಷ್ಮಿ ಆತ್ಮಹತ್ಯೆಗೆ ಶರಣಾಗಿದ್ದು, ಅವಳ ಸಾವಿಗೆ ಅಣ್ಣ ವರಸೆಯ ಕೃಷ್ಣನೆ ಕಾರಣ ಎಂದು ಮೃತಳ ಅಕ್ಕ ಆಕ್ರೋಶ ವ್ಯಕ್ತಪಡಿಸಿದ್ದಾಳೆ. ಇನ್ನೂ ತಂಗಿ ಸಾವಿನ ಮನೆ ಸೇರಿದ್ರೆ, ಅಣ್ಣ ಪೆರೇಸಂದ್ರ ಪೊಲೀಸರ ಭಯದಿಂದ ನಾಪತ್ತೆಯಾಗಿದ್ದಾನೆ. ಈ ಸಂಬಂಧ ಪೆರೇಸಂದ್ರ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

# ನೆರೆಹೊರೆಯವರ ಮೇಲೆ ವರದಕ್ಷಿಣೆ ಕಿರುಕುಳ ಕೇಸ್ ಹಾಕುವಂತಿಲ್ಲ: ಹೈಕೋರ್ಟ್ ಮಹತ್ವದ ತೀರ್ಪು

**ಬೆಂಗಳೂರು:** ವರದಕ್ಷಿಣೆ ಕಿರುಕುಳ ಪ್ರಕರಣಗಳ ದುರುಪಯೋಗದ ಕುರಿತಾಗಿ ಕರ್ನಾಟಕ ಹೈಕೋರ್ಟ್ ಮಹತ್ವದ ಸಂದೇಶ ನೀಡಿದೆ. ಭಾರತೀಯ ದಂಡ ಸಂಹಿತೆಯ (IPC) ಸೆಕ್ಷನ್ 498ಎ ಅಡಿಯಲ್ಲಿ ಪತಿ ಅಥವಾ ಆತನ ಕುಟುಂಬ ಸದಸ್ಯರ ವಿರುದ್ಧ ಮಾತ್ರ ದೂರು ದಾಖಲಿಸಬಹುದೇ ಹೊರತು, ಪಕ್ಕದ ಮನೆಯವರು ಅಥವಾ ನೆರೆಹೊರೆಯವರ ಮೇಲೆ ಪ್ರಕರಣ ದಾಖಲಿಸಲು ಅವಕಾಶವಿಲ್ಲ ಎಂದು ಹೈಕೋರ್ಟ್ ತೀರ್ಪು ನೀಡಿದೆ.

ನ್ಯಾಯಮೂರ್ತಿ ಎಂ. ನಾಗಪ್ರಸನ್ನ ಅವರಿದ್ದ ಪೀಠ, ತಮ್ಮ ವಿರುದ್ಧ ದಾಖಲಾಗಿದ್ದ ಕ್ರಿಮಿನಲ್ ಪ್ರಕರಣವನ್ನು ರದ್ದುಪಡಿಸುವಂತೆ ಮಹಿಳೆಯೊಬ್ಬರು ಸಲ್ಲಿಸಿದ್ದ ಅರ್ಜಿಯನ್ನು ಮಾನ್ಯಗೊಳಿಸಿ, 498ಎ ಅಡಿಯ ದೂರನ್ನು ರದ್ದುಗೊಳಿಸಿದೆ.

**ಪ್ರಕರಣದ ಹಿನ್ನೆಲೆ**

ಮುನಿರತ್ನಮ್ಮ ಎಂಬ ಮಹಿಳೆ, ತನ್ನ ಪತಿ ಹಾಗೂ ಆತನ ಕುಟುಂಬ ಸದಸ್ಯರ ವಿರುದ್ಧ ವರದಕ್ಷಿಣೆ ಕಿರುಕುಳ ನೀಡಿದ ಆರೋಪ ಮಾಡಿ ಪೊಲೀಸ್ ಠಾಣೆಯಲ್ಲಿ ದೂರು ದಾಖಲಿಸಿದ್ದರು. ದೂರುದಲ್ಲಿ ಪತಿ, ಅತ್ತೆ, ಮಾವ, ನಾದಿನಿ ಮಾತ್ರವಲ್ಲದೆ ಪಕ್ಕದ ಮನೆಯ ಮಹಿಳೆ ಆಶಾ ಅವರನ್ನೂ ಆರೋಪಿಗಳ ಪಟ್ಟಿಗೆ ಸೇರಿಸಲಾಗಿತ್ತು. ಆಶಾ ಅವರು ವೈವಾಹಿಕ ಜೀವನದಲ್ಲಿ ಕಿರುಕುಳ ನೀಡಲು ಸಹಕರಿಸಿದ್ದಾರೆ ಎಂಬ ಆರೋಪ ಮಾಡಲಾಗಿತ್ತು. ಈ ಹಿನ್ನೆಲೆಯಲ್ಲಿ ಆಶಾ ಅವರು ತಮ್ಮ ವಿರುದ್ಧ ದಾಖಲಾದ ಪ್ರಕರಣವನ್ನು ಪ್ರಶ್ನಿಸಿ ಹೈಕೋರ್ಟ್ ಮೆಟ್ಟಿಲೇರಿದ್ದರು. ತಾವು ಕುಟುಂಬದ ಸದಸ್ಯರಲ್ಲ, ಕೇವಲ ನೆರೆಹೊರೆಯವರು ಎಂಬ ಕಾರಣ ನೀಡಿ, ತಮ್ಮ ವಿರುದ್ಧ 498ಎ ಅಡಿಯಲ್ಲಿ ಕೇಸ್ ದಾಖಲಿಸುವುದು ಕಾನೂನುಬಾಹಿರ ಎಂದು ವಾದಿಸಿದ್ದರು.

**ಹೈಕೋರ್ಟ್ ಅಭಿಪ್ರಾಯ**

ಅರ್ಜಿಯ ವಿಚಾರಣೆ ನಡೆಸಿದ ಹೈಕೋರ್ಟ್, IPC ಸೆಕ್ಷನ್ 498ಎ ಕೇವಲ ಪತಿ ಅಥವಾ ಪತಿಯ ಸಂಬಂಧಿಕರಿಗೆ ಮಾತ್ರ ಅನ್ವಯಿಸುತ್ತದೆ ಎಂಬುದನ್ನು ಸ್ಪಷ್ಟಪಡಿಸಿದೆ. ವೈವಾಹಿಕ ವಿವಾದವು ಪತಿ–ಪತ್ನಿ ಅಥವಾ



ಅವರ ಕುಟುಂಬದ ಒಳಗಿನ ವಿಷಯವಾಗಿದ್ದು, ಪರಿಚಯವಿಲ್ಲದ ವ್ಯಕ್ತಿಗಳು, ಸ್ನೇಹಿತರು ಅಥವಾ ನೆರೆಹೊರೆಯವರನ್ನು ಆರೋಪಿಗಳನ್ನಾಗಿ ಮಾಡುವಂತಿಲ್ಲ ಎಂದು ನ್ಯಾಯಾಲಯ ಅಭಿಪ್ರಾಯಪಟ್ಟಿದೆ.

ಈ ಹಿನ್ನೆಲೆಯಲ್ಲಿ, ಆಶಾ ಅವರ ವಿರುದ್ಧ ದಾಖಲಾಗಿದ್ದ IPC ಸೆಕ್ಷನ್ 498ಎ ಅಡಿಯ ಆರೋಪಗಳನ್ನೂ ನ್ಯಾಯಾಲಯ ರದ್ದುಗೊಳಿಸಿದೆ.

**ಕಾನೂನಿನ ದುರುಪಯೋಗಕ್ಕೆ ಎಚ್ಚರಿಕೆ**

498ಎ ಕಾಯ್ದೆ ಮಹಿಳೆಯರನ್ನು ವರದಕ್ಷಿಣೆ ಕಿರುಕುಳದಿಂದ ರಕ್ಷಿಸಲು ರೂಪಿಸಲಾದ ಮಹತ್ವದ ಕಾನೂನು. ಆದರೆ ಇತ್ತೀಚಿನ ವರ್ಷಗಳಲ್ಲಿ ಈ ವಿಧಾನದ ದುರುಪಯೋಗದ ಆರೋಪಗಳು ಹೆಚ್ಚುತ್ತಿರುವ ಹಿನ್ನೆಲೆ, ಸುಪ್ರೀಂ ಕೋರ್ಟ್ ಹಾಗೂ ವಿವಿಧ ಹೈಕೋರ್ಟ್‌ಗಳು ಎಚ್ಚರಿಕೆ ನೀಡುತ್ತಲೇ ಬಂದಿವೆ. ನ್ಯಾಯಾಲಯ, ಕಾನೂನಿನ ಉದ್ದೇಶ ರಕ್ಷಣೆ ಆಗಬೇಕೇ ಹೊರತು ಪ್ರತೀಕಾರವಾಗಬಾರದು ಎಂಬ ಸಂದೇಶವನ್ನು ಪರೋಕ್ಷವಾಗಿ ನೀಡಿದೆ ಎಂದು ಕಾನೂನು ತಜ್ಞರು ಅಭಿಪ್ರಾಯಪಟ್ಟಿದ್ದಾರೆ.

**ಮತ್ತೊಂದು ಪ್ರಕರಣ**

ಇದೇ ವೇಳೆ, ಕರ್ನಾಟಕ ಹೈಕೋರ್ಟ್‌ನಲ್ಲಿ ಕೆಲಸ ಕೊಡಿಸುವುದಾಗಿ ಹೇಳಿ ಜನರನ್ನು ನಂಬಿಸಿ ಹಣ ಪಡೆದು ವಂಚಿಸಿದ ಪ್ರಕರಣವೂ ಬೆಳಕಿಗೆ ಬಂದಿದೆ. ಹೈಕೋರ್ಟ್ ರಿಜಿಸ್ಟ್ರಾರ್ ಜನರಲ್ ಅವರ ಸಹಿ ಹಾಗೂ ದಾಖಲೆಗಳನ್ನು ನಕಲಿ ಮಾಡಿ ಉದ್ಯೋಗ ನೀಡುವ ಭರವಸೆ ನೀಡಿ ವಂಚನೆ ನಡೆಸಿದ ಆರೋಪದ ಮೇಲೆ ಏಳು ಮಂದಿಯ ವಿರುದ್ಧ ಪ್ರಕರಣ ದಾಖಲಾಗಿದೆ. ಈ ಪ್ರಕರಣದ ತನಿಖೆ ಮುಂದುವರಿದಿದೆ.

Printed by: R Ramesh, Published by Abhishek D R On Behalf of Abhishek D R, Printed at Maruthi Enterprises. No.1159, Near Floor Mill, D Cross, Doddaballapura Town, Bengaluru rural, Karnataka - 561203, Published at No. 3769/1, Rajarathna Nivasa, KSRTC Layout, Near Ambedkar Stadium, Rayan Nagara, Nelamangala. Editor Abhishek D R.